ಸಂಪುಟ : 9 ಸಂಚಿಕೆ 157 ಪುಟ : 4 ಬೆಲೆ: 3.00 ಶನಿವಾರ ಜುಲೈ 27 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 157 Pages : 4 Price : 3.00 Saturday July 27 2024 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25




## ಅತಿವೃಷ್ಟಿ ನಿರ್ವಹಣೆಗಾಗಿ ನೋಡಲ್ ಅಧಿಕಾರಿಗಳ ನೇಮಕ

■ ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕು ಮಟ್ಟದಲ್ಲಿ ಸರ್ಕಾರದ ವಿವಿಧ ಯೋಜನೆಗಳ ಅಭಿವೃದ್ಧಿ ಕಾರ್ಯಕ್ರಮಗಳ ಅನುಷ್ಠಾನ ಹಾಗೂ ಅತಿವೃಷ್ಟಿ / ಬರ ನಿರ್ವಹಣೆಯ ಸಮಗ್ರ ಉಸ್ತುವಾರಿಗಾಗಿ ತಾಲೂಕುಗಳಿಗೆ ಒಬ್ಬರಂತೆ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಈ ಕೆಳಗಿನಂತೆ ನೇಮಕ ಮಾಡಲಾಗಿದೆ.

ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರಾದ ಗಂಗಪ್ಪ ಎಂ,– ಗದಗ ತಾಲೂಕು, ಮೊಬೈಲ್ ಸಂಖ್ಯೆ 99010–08594 : ತೋಟಗಾರಿಕೆ ಇಲಾಖೆಯ ಉಪನಿರ್ದೇಶಕರಾದ ಶಶಿಕಾಂತ ಕೋಟಿಮನಿ– ಗಜೇಂದ್ರಗಡ ತಾಲೂಕು, ಮೊ.ಸಂ.94489–99231 ; ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿ ಅಮಿತ್ ಬಿದರಿ– ಲಕ್ಷ್ಮೇಶ್ವರ ತಾಲೂಕು, ಮೊ.ಸಂ. 97426–49018; ರೇಷ್ಮೆ ಇಲಾಖೆಯ ಉಪ ನಿರ್ದೇಶಕ ಮಹೇಶ ವಾಘೇ– ಮುಂಡರಗಿ ತಾಲೂಕು, ಮೊ.ಸಂ.97433–99008; ಪಶು ಪಾಲನೆ ಮತ್ತು ಪಶು ವೈದ್ಯ ಸೇವಾ ಇಲಾಖೆ ಉಪನಿರ್ದೇಶಕರಾದ ಎಚ್.ಬಿ. ಹುಲಗಣ್ಣವರ– ನರಗುಂದ ತಾಲೂಕು, 94486–40407; ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಎಮ್.ವಿ. ಚಳಗೇರಿ– ರೋಣ ತಾಲೂಕು, 94808–65002; ಜಿ.ಪಂ.ಉಪ ಕಾರ್ಯದರ್ಶಿ ಸಿ.ಆರ್.ಮುಂಡರಗಿ– ಶಿರಹಟ್ಟಿ ತಾಲೂಕು , 94808–65003.

ನೇಮಕ ಮಾಡಲಾದ ಅಧಿಕಾರಿಗಳು ತಮಗೆ ವಹಿಸಿದ ತಾಲೂಕುಗಳಲ್ಲಿ ತಾಲೂಕು ಮಟ್ಟದ ಎಲ್ಲ ಕಚೇರಿ ಮುಖ್ಯಸ್ಥರೊಂದಿಗೆ ಸಮನ್ವಯ ಸಾಧಿಸಿ ಸರ್ಕಾರದ ವಿವಿಧ ಯೋಜನೆಗಳನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸಿ ಪ್ರಗತಿ ಸಾಧಿಸುವುದು. ಪ್ರವಾಹದ ಸನ್ನಿವೇಶದಲ್ಲಿ ಅಗತ್ಯ ರಕ್ಷಣಾ ಕಾರ್ಯಗಳನ್ನು ಸಂತ್ರಸ್ಥಕ್ಕೊಳಗಾಗುವ ಜನರ ಸುರಕ್ಷತೆ, ಜಾನುವಾರುಗಳ ಸಂರಕ್ಷಣೆ ಮುಂತಾದ ಅಗತ್ಯ ನೆರವಿನೊಂದಿಗೆ ಕಾರ್ಯ ಪ್ರವೃತ್ತರಾಗಲು ಹಾಗೂ ಸಂಬಂಧಪಟ್ಟ ತಹಸೀಲ್ದಾರರೊಂದಿಗೆ ಸಂಪರ್ಕವನ್ನಿಟ್ಟುಕೊಂಡು ಕೇಂದ್ರ ಸರ್ಕಾರದ ಮಾರ್ಗಸೂಚಿ ಅನ್ವಯ ಪರಿಹಾರ ಕಾರ್ಯಗಳನ್ನು ಕೈಗೊಳ್ಳಬೇಕು. ಅಲ್ಲದೇ ಪ್ರವಾಹ ಪೀಡಿತ ತಾಲೂಕುಗಳಲ್ಲಿ ತೆರೆಯಲಾಗುವ ಕಾಳಜಿ ಕೇಂದ್ರಗಳಲ್ಲಿನ ಸಂತ್ರಸ್ಥರಿಗೆ ಊಟೋಪಹಾರದ ವ್ಯವಸ್ಥೆ ಮೂಲಭೂತ ಸೌಕರ್ಯಗಳ ವ್ಯವಸ್ಥೆ ಮತ್ತು ಅವಶ್ಯಕತೆಗಳ ಪೂರೈಕೆಯ ಮೇಲುಸ್ತುವಾರಿಯನ್ನು ನಿರ್ವಹಿಸಬೇಕು. ವಿವಿಧ ಯೋಜನೆಗಳ ಪ್ರಗತಿಗೆ ಸಂಬಂಧಿಸಿದಂತೆ ಕೈಗೊಂಡ ಕ್ರಮದ ವರದಿಯನ್ನು ಪ್ರತಿ 15 ದಿನಗಳಿಗೊಮ್ಮೆ ಆಡಳಿತ ವಿಭಾಗಕ್ಕೆ ಸಲ್ಲಿಸಬೇಕೆಂದು ಜಿಲ್ಲಾಧಿಕಾರಿ ಗೋವಿಂದರೆಡ್ಡಿ ಅವರು ಆದೇಶದಲ್ಲಿ ತಿಳಿಸಿದ್ದಾರೆ.

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಜು.27 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 1, 2, 3ರಲ್ಲಿ ಗುಂಪಿನ ಮನೆ, ಭಾಂಡಗೆ ಲೈನ್, ಪೋಲಿಸ್ ಸ್ಟೇಷನ್ ಕೆಳಗಿನ ಭಾಗ, ಸ್ವಿಮಿಂಗ್ ಪೂಲ್ ಉರ್ದು ಶಾಲೆ, ಕಲಾಮಂದಿರ ರಸ್ತೆಯ ಉಳಿದ ಕೆಲವು ಭಾಗಗಳು, ಎಸ್.ಎಮ್.ಕೃಷ್ಣಾ ನಗರದ ಮೇಲಿನ ಭಾಗ, ಕೆಳಗಿನ ಭಾಗ ಉಳಿದ ಕೆಲವು ಭಾಗಗಳು, ಹೊಂಬಳ ನಾಕಾ, ಜನತಾ ಕಾಲೋನಿ, ಕಟಗಿ ಅಡ್ಡೆದ ಲೈನ್, ಶೌಚಾಲಯ ಹಿಂದಿನ ಭಾಗ ಲೈನ್, ಎಲ್ಲಮ್ಮನ ಗುಡಿ ಲೈನ್, ಮಸೂತಿ ಸುತ್ತ ಮುತ್ತಲಿನ ಭಾಗಗಳು ನೆಲ್ಸನ್ ಮಂಡೆಲಾ ಲೈನ್, ಮೇಂಬರ್ ಲೈನ್ ಡಂಬಳವರ ಲೈನ್, ಹೊಸ ಹುಡ್ಕೋ,

ವಾರ್ಡ್ ನಂ. 35ರಲ್ಲಿ ವಡ್ಡರಗೇರಿ 46 ಪ್ಲಾಟ್, ಶಿವಾನಂದ ಗಾರ್ಡನ್, ಬಸವೇಶ್ವರ ಶಾಲೆ, ಇ.ಡಬ್ಲ್ಯೂ ಎಸ್., ಡಿಪೋ ಹಿಂದಿನ ಭಾಗ, 1ನೇ ಕ್ರಾಸ್, 2ನೇ ಕ್ರಾಸ್, 3ನೇ ಕ್ರಾಸ್, ಮಸೂತಿ ಲೈನ ಮೂರಶಿಳ್ಳಿನ ವಕಾರ, ರಾಮನಗರ, ಸೇವಾಲಾಲ ನಗರ ಬಾಪೂಜಿ ನಗರ, 9ನಂ. ಶಾಲೆ, ಆದರ್ಶನಗರ, ನೀಲಮ್ಮ ತಾಯಿ ಮಠ, ಉಳಿದ ಕೆಲವು ಭಾಗಗಳು,

## ಸಭಾಪತಿ ಬಸವರಾಜ್ ಹೊರಟ್ಟಿ ಜಿಲ್ಲಾ ಪ್ರವಾಸ ನಾಳೆ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ್ ಹೊರಟ್ಟಿ ಅವರು ಜುಲೈ 28 ರಂದು ಮಧ್ಯಾಹ್ನ 1 ಗಂಟೆಗೆ ಗದುಗಿಗೆ ಆಗಮಿಸಿ ಗದಗ ಜಿಲ್ಲಾಡಳಿತ ಭವನದಲ್ಲಿ ಗದಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಆಶ್ರಯದಲ್ಲಿ ಅವ್ವ ಸೇವಾ ಟ್ರಸ್ಟ್ ಸ್ಥಾಪಿಸಿದ ದತ್ತಿನಿಧಿಯಿಂದ ರಾಜ್ಯ ಮಟ್ಟದ ಉತ್ತಮ ಮಹಿಳಾ ವರದಿಗಾರರಿಗೆ ನೀಡುವ ಅವ್ವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 2 ಗಂಟೆಗೆ ಗದುಗಿನಿಂದ ಹುಬ್ಬಳ್ಳಿಗೆ ರಸ್ತೆ ಮೂಲಕ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

### ಮಹಾರಾಷ್ಟ್ರದಲ್ಲಿ ಅಬ್ಬರದ ಮಳೆ: ಗದಗ ಜಿಲ್ಲೆಯಲ್ಲಿ ಪ್ರವಾಹ ಭೀತಿ..!

# ಕಟ್ಟೆಚ್ಚರ ವಹಿಸಲು ಜಿಲ್ಲಾಡಳಿತ ಸಜ್ಜು

■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾರಾಷ್ಟ್ರದಲ್ಲಿ ಅಬ್ಬರದ ಮಳೆ ಸುರಿಯುತ್ತಿದ್ದು, ರಾಜ್ಯದ ಹಲವು ಜಿಲ್ಲೆಗಳಲ್ಲಿ ಪ್ರವಾಹ ಭೀತಿ ಎದುರಾಗಿದೆ. ಅದರಲ್ಲೂ ಬೆಳಗಾವಿ ಜಿಲ್ಲೆಯ ಸವದತ್ತಿ ಬಳಿಯ ನವಿಲುತೀರ್ಥ ಡ್ಯಾಂ ಭರ್ತಿಯಾಗಿದ್ದು, ಯಾವುದೇ ಕ್ಷಣದಲ್ಲೂ ಮಲಪ್ರಭಾ ನದಿಗೆ ನೀರು ಹರಿ ಬಿಡುವ ಸಾಧ್ಯತೆ ಇದೆ. ಹೀಗಾಗಿ ಶುಕ್ರವಾರ ಜಿಲ್ಲಾಧಿಕಾರಿ ಗೋವಿಂದ ರೆಡ್ಡಿ, ಬೆಣ್ಣೆ ಹಳ್ಳ ಹಾಗೂ ಮಲಪ್ರಭಾ ನದಿ ತೀರದಲ್ಲಿ ಇರುವ ಗ್ರಾಮಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಬೆಣ್ಣೆ ಹಳ್ಳದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮಳೆ ಜೋರಾಗಿದ್ದು, ಬೆಣ್ಣೆ ಹಳ್ಳಕ್ಕೆ ಹೊಂದಿಕೊಂಡಿರುವ ಜಿಲ್ಲೆಯ ನರಗುಂದ ತಾಲೂಕಿನ ಕುರ್ಲಗೇರಿ ಗ್ರಾಮಕ್ಕೆ ಬೇಟಿ ನೀಡಿ ಪರಿಶೀಲನೆ ನಡೆಸಿದರು.

ಸಂಭವಿಸಬಹುದಾದ ಪ್ರವಾಹ ಮಟ್ಟ ಹಾಗೂ ಪ್ರವಾಹ ನಿಯಂತ್ರಣಕ್ಕೆ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ನಂತರ ಲಕಮಾಪೂರ ಗ್ರಾಮಕ್ಕೂ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ನಂತರ ರೋಣ ತಾಲೂಕಿನ ಮೆಣಸಗಿ ಗ್ರಾಮಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು,

ಗ್ರಾಮಸ್ಥರೊಂದಿಗೆ ಚರ್ಚೆ ಮಾಡಿದರು.

ಪ್ರವಾಹ ಬಂದ್ರೆ ಏನೆಲ್ಲಾ ಸಮಸ್ಯೆ ಆಗಲಿದೆ ಎಂಬುದನ್ನು ಗ್ರಾಮಸ್ಥರಿಂದ ಮಾಹಿತಿ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧಿಕಾರಿಗಳು, ಯಾವುದೇ ಕ್ಷಣದಲ್ಲೂ ನದಿಗೆ ನೀರು ಹರಿಬಿಡುವ ಸಾಧ್ಯತೆ ಇದೆ.





ಹೀಗಾಗಿ ನದಿ ಪಾತ್ರಕ್ಕೆ ಯಾರೂ ಹೋಗಬಾರದು. ಏನೇ ಸಮಸ್ಯೆ ಇದ್ರೂ ಅಧಿಕಾರಿಗಳಿಗೆ ಮಾಹಿತಿ ನೀಡುವಂತೆ ಗ್ರಾಮಸ್ಥರಿಗೆ ಮನವಿ ಮಾಡಿದರು.

ಜಿಲ್ಲಾಡಳಿತ ಸಕಲ ಸಿದ್ದತೆ ಮಾಡಿಕೊಂಡಿದೆ. ಜನರು ಆತಂಕ ಪಡುವ ಅಗತ್ಯವಿಲ್ಲ ಎಂದು ಗ್ರಾಮಸ್ಥರಿಗೆ ಜಿಲ್ಲಾಧಿಕಾರಿಗಳು ಧೈರ್ಯ ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಸಿಇಓ ಭರತ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ ಎಸ್ ನೇಮಗೌಡ, ರೋಣ ಹಾಗೂ ನರಗುಂದ ತಾಲೂಕಿನ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಇದ್ದರು.

### ಕಾರ್ಗಿಲ್ ಯುದ್ಧದಲ್ಲಿ ಭಾರತ ಗೆದ್ದು 25 ವರ್ಷ ತುಂಬಿದ ಹಿನ್ನೆಲೆ

# ಕಾರ್ಗಿಲ್ ಸ್ತೂಪಕ್ಕೆ ಗೌರವ ನಮನ ಸಲ್ಲಿಸಿದ ಜಿಲ್ಲಾಧಿಕಾರಿ ದಿವ್ಯ ಪ್ರಭು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ದೇಶದ ರಕ್ಷಣೆಗಾಗಿ ದುಡಿಯುವ ಸೈನಿಕರಿಗೆ ಮತ್ತು ರಾಷ್ಟ್ರದ ಗಡಿ ರಕ್ಷಣೆಗಾಗಿ ಯುದ್ದದಲ್ಲಿ ಹುತಾತ್ಮರಾದ ಸೈನಿಕರಿಗೆ ಸದಾ ನಮ್ಮ ಬೆಂಬಲ, ಗೌರವವಿದೆ. ಅವರ ಕುಟುಂಬಗಳ ಬೇಕು, ಬೇಡಿಕೆಗಳ ಬಗ್ಗೆ ಆದ್ಯತೆ ಮೇಲೆ ಗಮನ ಹರಿಸಲು ಮತ್ತು ಅಗತ್ಯ ಸೌಲಭ್ಯ ಕಲ್ಪಸಲು ಸರಕಾರ ಸೈನಿಕ ಕಲ್ಯಾಣ ಮಂಡಳಿಯಿಂದ ಕ್ರಮವಹಿಸಿದೆ. ಜಿಲ್ಲೆಯ ಯೋಧರ ಕುಟುಂಬಗಳ ಕುಂದುಕೊರತೆ ಆಲಿಸಲು ಸೈನಿಕ ಕಲ್ಯಾಣ ಮಂಡಳಿ ಅಧಿಕಾರಿಗೆ ಸಭೆ ಜರುಗಿಸಲು ಮತ್ತು ಸಭೆ ವರದಿ ಸಲ್ಲಿಸಲು ಜಿಲ್ಲಾಧಿಕಾರಿ ದಿವ್ಯ ಪ್ರಭು ಉಪನಿರ್ದೇಶಕರಿಗೆ ನಿರ್ದೇಶನ ನೀಡಿದರು.

ಅವರು, ಕಾರ್ಗಿಲ್ ವಿಜಯೋತ್ಸವದ ದಿನಾಚರಣೆ ಹಿನ್ನೆಲೆಯಲ್ಲಿ ಶುಕ್ರವಾರ ಬೆಳಿಗ್ಗೆ ಡಿಸಿ ಕಂಪೌಂಡ್‌ನಲ್ಲಿರುವ ಕಾರ್ಗಿಲ್ ಸ್ತೂಪಕ್ಕೆ ಜಿಲ್ಲಾಡಳಿತದ ಪರವಾಗಿ ರಿತ್ ಮತ್ತು ಪುಷ್ಪ ಸಮರ್ಪಿಸಿ, ಗೌರವ ನಮನ ಸಲ್ಲಿಸಿ ಮಾತನಾಡಿದರು.



ಆಪರೇಶನ್ ವಿಜಯ್ ಹೆಸರಿನಲ್ಲಿ ನಡೆದ ಕಾರ್ಗಿಲ್ ಯುದ್ಧದಲ್ಲಿ ಭಾರತ ಗೆದ್ದು ಇಂದಿಗೆ 25 ವರ್ಷಗಳಾಗಿವೆ. ಕಾರ್ಗಿಲ್ ಸ್ತೂಪಕ್ಕೆ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಜಂಟಿ ನಿರ್ದೇಶಕ ಡಾ.ಪ್ರಕಾಶ ಎನ್.ಎಸ್., ಎನ್.ಸಿ.ಸಿ.24 ಬಟಾಲಿಯನ್ ಕಮಾಂಡೆಂಟ್, ಸೇನಾ ಅಧಿಕಾರಿಗಳು, ಮಾಜಿ ಸೈನಿಕರು, ಅವರ ಕುಟುಂಬಸ್ಥರು ಹಾಗೂ ಸೇನೆಯಲ್ಲಿರುವಾಗಲೇ ಪ್ರಾಣ ತ್ಯಾಗ ಮಾಡಿದ ಸೈನಿಕರ ಕುಟುಂಬಸ್ಥರು ಬಂದು ಗೌರವ ನಮನ ಸಲ್ಲಿಸಿದರು. ಇದೇ ವೇಳೆ ಎನ್‌ಸಿಸಿ ವಿದ್ಯಾರ್ಥಿಗಳು ಗೌರವ ವಂದನೆಯನ್ನು ಸಲ್ಲಿಸಿದರು.

## ಬಿಜೆಪಿಯಿಂದ ಕಾರ್ಗಿಲ್ ವಿಜಯೋತ್ಸವ



■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿಯಲ್ಲಿ ಬಿಜೆಪಿ ನಗರ ಘಟಕದ ವತಿಯಿಂದ ಶುಕ್ರವಾರ ಕಾರ್ಗಿಲ್ ವಿಜಯೋತ್ಸವವನ್ನು ಶಾಸಕರ ಕಾರ್ಯಾಲಯದಲ್ಲಿ ಆಚರಿಸಲಾಯಿತು. ಈ ಸಂದರ್ಭದಲ್ಲಿ ಮಾಜಿ ಸೈನಿಕರಾದ ದೇವಪ್ಪ ಪವಾರ, ಅಮಜದ ಹೆಸರೂರ, ವೀರಯೋಧ ದಿ.ಶಬ್ಬೀರ ಅಂಗಡಿ ಸಹೋದರ ಅಲ್ತಾಫ್ ಅಂಗಡಿ ಇವರುಗಳನ್ನು ಸನ್ಮಾನಿಸಲಾಯಿತು.

ಬಿಜೆಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ವೀರಣ್ಣ ಅಂಗಡಿ, ಫಕ್ಕೀರೇಶ ರಟ್ಟಿಹಳ್ಳಿ, ಗೂಳಪ್ಪ ಕರಿಗಾರ, ನಂದಾ ಪಲ್ಲೇದ, ರಾಮಣ್ಣ ಕಂಬಳಿ, ಪರಶುರಾಮ್ ಡೊಂಕಬಳ್ಳಿ, ಮಲ್ಲು ಕಬಾಡಿ, ಅನಿಲ ಪಾಶ್ಚಾಪೂರ, ಶರಣಪ್ಪ ಹೊಸೂರ, ಲಕ್ಷ್ಮಣ ಬಾರಬಾರ, ಶಶಿ ಗಾಣಗೇರ, ಮಹೇಶ ಕಲ್ಲಪ್ಪನವರ, ಜಗದೀಶ ತೇಲಿ, ಫಕ್ಕೀರೇಶ ಕರಿಗಾರ, ನಾಗೇಶ ಇಂಗಳಗಿ, ಗುಲಾಬ್ ಮಕಾನದಾರ, ಅಕ್ಬರ ಯಾದಗಿರಿ ಮುಂತಾದವರು ಉಪಸ್ಥಿತರಿದ್ದರು.

### ಬೆಂಬಿಡದೇ ಸುರಿದು ಭಯ ಮೂಡಿಸಿದ ಮಳೆ | ಅಧಿಕಾರಿಗಳಿಂದ ಗ್ರಾಮಗಳಿಗೆ ಭೇಟಿ

# ಮತ್ತೆ ಆವರಿಸಿದ ಪ್ರವಾಹ ಭೀತಿ


■ ವಿಜಯಸಾಕ್ಷಿ ಸುದ್ದಿ, ರೋಣ

ತಾಲೂಕಿನಲ್ಲಿ ಮತ್ತೆ ಪ್ರವಾಹ ಭೀತಿ ಎದುರಾಗಿದ್ದು, ತಹಸೀಲ್ದಾರ್ ನಾಗರಾಜ ಕೆ ನೇತೃತ್ವದಲ್ಲಿ ಅಧಿಕಾರಿಗಳ ತಂಡ ಪ್ರವಾಹ ಪೀಡಿತ ಗ್ರಾಮಗಳಿಗೆ ಶುಕ್ರವಾರ ಭೇಟಿ ನೀಡಿ, ಅಲ್ಲಿನ ವಸ್ತುಸ್ಥಿತಿಯನ್ನು ಪರಿಶೀಲಿಸಿದರು.

ಹಲವಾರು ದಿನಗಳಿಂದ ಬಿಟ್ಟೂ ಬಿಡದೆ ಸುರಿಯುತ್ತಿರುವ ಮಳೆಯಿಂದ ನಾನಾ ಭಾಗಗಳಲ್ಲಿ ಹಲವಾರು ರಿತಿಯ ಅವಾಂತರಗಳು ಸೃಷ್ಟಿಯಾಗಿವೆ. ಮಲಪ್ರಭಾ ನದಿ ತಿರದಲ್ಲೂ ಅತಿ ಹೆಚ್ಚು ಮಳೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ತಾಲೂಕಿನ ಪ್ರವಾಹ ಪೀಡಿತ ಗ್ರಾಮಗಳಿಗೆ ಭೇಟಿ ನೀಡಿ ಜನರಿಗೆ ಅರಿವು ಮೂಡಿಸಿದರು.

ಮಲಪ್ರಭಾ ನದಿ ತೀರದಲ್ಲಿ ಅತಿ ಹೆಚ್ಚು ಮಳೆಯಾದ ಸಂದರ್ಭದಲ್ಲಿ ರೋಣ ತಾಲೂಕಿ 16 ಗ್ರಾಮಗಳಿಗೆ ಪ್ರವಾಹ ಭೀತಿ ತಪ್ಪಿದಲ್ಲ. ಅಲ್ಲದೆ ತಾಲೂಕಿನಲ್ಲಿಯೂ ಸಹ ವಿಪರೀತ ಮಳೆಯಾಗುತ್ತಿದೆ. ಹೀಗಿರುವಾಗ, ಬೆಣ್ಣೆಹಳ್ಳ ಉಕ್ಕೇರಿದರೆ ತೀವ್ರ ಸಂಕಷ್ಟವನ್ನು ಎದುರಿಸಬೇಕಾದ ಸ್ಥಿತಿ ಎದುರಾಗುತ್ತದೆ.

ಬೆಳಗಾವಿ, ಹಾವೇರಿ, ಧಾರವಾಡ ಜಿಲ್ಲೆಗಳಲ್ಲಿ ವ್ಯಾಪಕವಾಗಿ ಮಳೆ ಸುರಿಯುತ್ತಿದೆ. ಇದರಿಂದ ಮಲಪ್ರಭಾ ಆಣೆಕಟ್ಟಿನಲ್ಲಿ ನೀರಿನ ಪ್ರಮಾಣ ಹೆಚ್ಚಾಗುವ ಎಲ್ಲ ಲಕ್ಷಣಗಳು ಕಂಡು ಬರುತ್ತಿವೆ. ನದಿಯ ನೀರನ್ನು ಯಾವುದೇ ಕ್ಷಣದಲ್ಲೂ ಹೊರಬಿಡುವ ಸಾಧ್ಯತೆಯಿದ್ದು, ಕಂದಾಯ ಇಲಾಖೆಯ ಸಿಬ್ಬಂದಿಗಳು ಗ್ರಾಮಗಳಲ್ಲಿಯೇ ಬಿಡಾರ ಹೂಡಿದ್ದಾರೆ.



ಗ್ರಾಮಗಳಿಗೆ ಭೇಟಿ ನೀಡುವ ಸಂದರ್ಭದಲ್ಲಿಯೇ ತಹಸೀಲ್ದಾರ್ ನಾಗರಾಜ ಕೆ ಸುರಕ್ಷತಾ ಸ್ಥಳಗಳನ್ನು ಗುರುತಿಸುವ ಕಾರ್ಯವನ್ನೂ ಮಾಡುತ್ತಿದ್ದಾರೆ. ಪ್ರವಾಹ ಪರಿಸ್ಥಿತಿ ಎದುರಾದರೆ ಕಾಳಜಿ ಕೇಂದ್ರ ತೆರೆಯಲು ಹಾಗೂ ಜನರನ್ನು ಸುರಕ್ಷಿತ ಸ್ಥಳಗಳಿಗೆ ಕಳುಹಿಸುವ ಎಲ್ಲ ಮುಂಜಾಗೃತಾ ಕ್ರಮಗಳನ್ನು ಕೈಗೊಂಡಿದ್ದು, ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಸೇತುವೆಗಳನ್ನು ಸಹ ವೀಕ್ಷಣೆ ಮಾಡಿ ಜನರಲ್ಲಿ ಎಚ್ಚರಿಕೆಯಿಂದ ಇರುವುಂತೆ ಮನವಿ ಮಾಡಿದ್ದಾರೆ.

## ಸಂಪಾದಕೀಯ

# ಮುಡಾ ಹಗರಣದಲ್ಲಿ ಮೈಮರೆತ ಆಡಳಿತ ಮತ್ತು ಪ್ರತಿಪಕ್ಷಗಳು

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಸಂಕಷ್ಟ ದಿನೇ ದಿನೇ ಹೆಚ್ಚುತ್ತಿದೆ. ನಿಯಮ ಮೀರಿ ಜಾಗ ಪಡೆದುಕೊಂಡಿರುವ ಬಗ್ಗೆ ದಾಖಲೆಗಳನ್ನು ಹಿಡಿದು ಪ್ರತಿಪಕ್ಷ ನಾಯಕರು ಸಿದ್ದರಾಮಯ್ಯ ಮೇಲೆ ಮುಗಿ ಬೀಳುತ್ತಿದ್ದಾರೆ.

ಪ್ರತಿಪಕ್ಷಗಳ ಟೀಕೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತೀಕ್ಷ್ಣವಾಗಿ ಪ್ರತಿಕ್ರಿಯೆ ಕೊಟ್ಟಿದ್ದಾರೆ. ದಾಖಲೆ ಸಮೇತ ಪ್ರತಿಪಕ್ಷಗಳ ಆರೋಪಗಳಿಗೆ ಪ್ರತ್ಯುತ್ತರವನ್ನ ನೀಡಿದ್ದಾರೆ. ಆದರೆ ಇದೇ ಮೊದಲ ಬಾರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಮೇಲಿನ ಆರೋಪಗಳಿಗೆ ಸ್ಪಷ್ಟೀಕರಣ ನೀಡುವಾಗ, ಆತ್ಮವಿಶ್ವಾಸ ಹೊಂದಿದಂತೆ ಕಂಡುಬಂದಿದೆ.

ಹೀಗೆ ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರು ಮೂಡ ಹಗರಣವನ್ನ ಮುಂದಿಟ್ಟುಕೊಂಡು ರಾಜಕಾರಣ ನಡೆಸುತ್ತಿದ್ದರೆ, ರಾಜ್ಯದ ಜನ ಭಾರಿ ಮಳೆಯಿಂದ ಸಂಕಷ್ಟಕ್ಕೆ ಅನುಭವಿಸುವಂತಾಗಿದೆ.


ಸಿದ್ದರಾಮಯ್ಯ ಅಧಿಕಾರಕ್ಕೆ ಬಂದರೆ ಬರ ಎನ್ನುವ ಮಾತನ್ನು ಸುಳ್ಳಾಗಿಸುವ ರೀತಿಯಲ್ಲಿ ರಾಜ್ಯದಲ್ಲಿ ಮಳೆಯಾಗುತ್ತಿದೆ. ಅದರಲ್ಲೂ ಕರಾವಳಿ ಭಾಗದಲ್ಲಿ ಭೂಕುಸಿತ ಉಂಟಾಗಿ ಸಾವು ನೋವುಗಳು ಸಂಭವಿಸಿದೆ. ಪಶ್ಚಿಮ ಘಟ್ಟದಲ್ಲಿ ಸುರಿಯುತ್ತಿರುವ ಮಳೆಯಿಂದ ನದಿಗಳು ಮೈದುಂಬಿ ಉತ್ತರ ಕರ್ನಾಟಕ ಭಾಗದಲ್ಲಿ ನೆರೆ ಭೀತಿ ಎದುರಾಗಿದೆ.

ಆದರೂ ಆಡಳಿತ ಮತ್ತು ಪ್ರತಿಪಕ್ಷದವರಿಗೆ ಮುಡಾ ಹಗರಣವೇ ಮುಖ್ಯವಾಗಿದೆ. ಸಿದ್ದರಾಮಯ್ಯ ಕೆಳಗಿಳಿಸಲು ಬಿಜೆಪಿ ಬೆಂಗಳೂರಿಂದ ಮೈಸೂರುವರೆಗೆ ಪಾದಯಾತ್ರೆ ನಡೆಸಲು ಮುಂದಾಗಿದ್ದಾರೆ. ಆದರೆ ಜನರ ಕಷ್ಟಗಳನ್ನು ಅರಿಯಲು ಕಾರಿನಲ್ಲಿ ಜನರ ಬಳಿ ಹೋಗಲು ಸಾಧ್ಯವಾಗುತ್ತಿಲ್ಲ.

ಇನ್ನು ಆಡಳಿತ ಪಕ್ಷದವರಿಗೆ ಪ್ರತಿಪಕ್ಷಗಳ ಟೀಕೆಗಳಿಗೆ ಉತ್ತರ ಕೊಡುವುದೇ ಕೆಲಸವಾಗಿದೆ. ಮುಡಾ ಹಗರಣದಲ್ಲಿ ತಪ್ಪು ಮಾಡಿಲ್ಲ ಎನ್ನುವುದಾದರೆ ಮುಖ್ಯಮಂತ್ರಿ ಆದಿಯಾಗಿ ಸಚಿವ ಸಂಪುಟದ ಎಲ್ಲರೂ ತಮ್ಮ ತಮ್ಮ ಜಿಲ್ಲೆಗಳಿಗೆ ತೆರಳಿ, ಮಳೆಯಿಂದ ಜನರಿಗೆ ಆಗಿರುವ ಹಾನಿಗೆ ಸ್ಪಂದಿಸುವ ಕೆಲಸ ಮಾಡಲಿ.

# BSNL ಬಳಕೆದಾರರ ಮಾಹಿತಿ ಸೋರಿಕೆ ಒಪ್ಪಿಕೊಂಡ ಕೇಂದ್ರ ಸರ್ಕಾರ

■ವಿಜಯಸಾಕ್ಷಿ ಸುದ್ದಿ, ನವದೆಹಲಿ




ಸರ್ಕಾರಿ ಸ್ವಾಮ್ಯದ ಟೆಲಿಕಾಂ ಆಪರೇಟರ್ ಭಾರತ್ ಸಂಚಾರ್ ನಿಗಮ್ ಲಿಮಿಟೆಡ್ (ಬಿಎಸ್‌ಎನ್‌ಎಲ್)ನಲ್ಲಿ ಬಳಕೆದಾರರ ಮಾಹಿತಿ ಸೋರಿಕೆಯಾಗಿರುವುದನ್ನು ಕೇಂದ್ರ ಸರ್ಕಾರ ಒಪ್ಪಿಕೊಂಡಿದೆ.

ಲೋಕಸಭೆಯಲ್ಲಿ ಕಾಂಗ್ರೆಸ್ ಸಂಸದ ಅಮರ್ ಸಿಂಗ್ ಕೇಳಿದ ಪ್ರಶ್ನೆಗೆ ಲಿಖಿತವಾಗಿ ಉತ್ತರಿಸಿದ ಕೇಂದ್ರ ಸಂಪರ್ಕ ಖಾತೆ ರಾಜ್ಯ ಸಚಿವ ಚಂದ್ರಶೇಖರ್ ಪೆಮ್ಮಸಾನಿ ಅವರು, 2024ರ ಮೇ 20ರಂದು ಮಾಹಿತಿ ಸೋರಿಕೆಯಾಗಿದೆ ಎಂದಿದ್ದಾರೆ.

ಸೈಬರ್ ಭದ್ರತಾ ಘಟನೆಗಳನ್ನು ನಿಭಾಯಿಸುವ ನೋಡಲ್ ಏಜೆನ್ಸಿಯಾದ ಇಂಡಿಯನ್ ಕಂಪ್ಯೂಟರ್ ಎಮರ್ಜೆನ್ಸಿ ರೆಸ್ಪಾನ್ಸ್ ಟೀಮ್ (ಸಿಇಆರ್‌ಟಿ-ಇನ್), ಬಿಎಸ್‌ಎನ್‌ಎಲ್‌ನ ಫೈಲ್ ಟ್ರಾನ್ಸ್‌ಫರ್ ಪ್ರೊಟೊಕಾಲ್ (ಎಫ್‌ಟಿಪಿ) ಸರ್ವರ್‌ಗಳಲ್ಲಿ ಇರುವ ಮಾಹಿತಿಯು ಸೋರಿಕೆಯಾಗಿರುವ ಮಾಹಿತಿಗೆ ಹೋಲಿಕೆಯಾಗಿದೆ ಎಂದು ತಿಳಿಸಿರುವುದಾಗಿ ಸಚಿವರು ಮಾಹಿತಿ ನೀಡಿದ್ದಾರೆ.


ಟೆಲಿಕಾಂ ನೆಟ್‌ವರ್ಕ್‌ನ ಹೋಮ್ ಲೊಕೇಶನ್ ರಿಜಿಸ್ಟರ್‌ನಲ್ಲಿ (ಹೆಚ್‌ಎಲ್‌ಆರ್) ಯಾವುದೇ ಮಾಹಿತಿ ಸೋರಿಕೆಯಾಗಿಲ್ಲ ಎಂದು ಸಲಕರಣೆ ತಯಾರಕರು ವರದಿ ಮಾಡಿದ್ದಾರೆ. ಆದ್ದರಿಂದ ಬಿಎಸ್‌ಎನ್‌ಎಲ್‌ನ ನೆಟ್‌ವರ್ಕ್‌ನಲ್ಲಿ ಯಾವುದೇ ಸೇವೆ ಸ್ಥಗಿತಗೊಂಡಿಲ್ಲ" ಎಂದು ಸಚಿವ ಪೆಮ್ಮಸಾನಿ ಹೇಳಿದ್ದಾರೆ.

ಟೆಲಿಕಾಂ ನೆಟ್‌ವರ್ಕ್‌ಗಳನ್ನು ಆಡಿಟ್ ಮಾಡಲು ಮತ್ತು ಭವಿಷ್ಯದ ಮಾಹಿತಿ ಸೋರಿಕೆಯನ್ನು ತಡೆಯಲು ಪರಿಹಾರ ಕ್ರಮಗಳನ್ನು ಸೂಚಿಸಲು ಕೇಂದ್ರ ಸರ್ಕಾರವು ಅಂತರ-ಸಚಿವಾಲಯ ಸಮಿತಿಯನ್ನು (ಐಎಂಸಿ) ಸ್ಥಾಪಿಸಿದೆ ಎಂದು ಸಚಿವರು ತಿಳಿಸಿದ್ದಾರೆ.

### ಮಸೂದೆಗಳಿಗೆ ಒಪ್ಪಿಗೆ ನೀಡುವಲ್ಲಿ ರಾಜ್ಯಪಾಲರಿಂದ ವಿಳಂಬ

# ಕೇಂದ್ರ-ರಾಜ್ಯ ಸರ್ಕಾರಗಳಿಗೆ ಸುಪ್ರೀಂನಿಂದ ನೋಟಿಸ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಸಕಾರಣವಿಲ್ಲದೆ ವಿಧೇಯಕಗಳನ್ನು ಹಲವು ತಿಂಗಳು ಬಾಕಿ ಇರಿಸುವ ರಾಜ್ಯಪಾಲರ ನಿರ್ಧಾರವನ್ನು ಪ್ರಶ್ನಿಸಿ ಕೇರಳ ಮತ್ತು ಪಶ್ಚಿಮ ಬಂಗಾಳ ಸರ್ಕಾರಗಳು ಸಲ್ಲಿಸಿರುವ ಮನವಿಯನ್ನು ಆಲಿಸಿದ ಸುಪ್ರೀಂ ಕೋರ್ಟ್, ಕೇಂದ್ರ ಮತ್ತು ಆಯಾ ರಾಜ್ಯಪಾಲರ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳಿಗೆ ಶುಕ್ರವಾರ ನೋಟಿಸ್ ಜಾರಿ ಮಾಡಿದೆ. ಮೂರು ವಾರಗಳಲ್ಲಿ ವಿವರವಾದ ಉತ್ತರವನ್ನು ಸಲ್ಲಿಸುವಂತೆ ಸೂಚಿಸಿದೆ.

ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್, ನ್ಯಾಯಮೂರ್ತಿಗಳಾದ ಜೆಬಿ ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ನೇತೃತ್ವದ ಸುಪ್ರೀಂ ಕೋರ್ಟ್‌ನ ತ್ರಿಸದಸ್ಯ ಪೀಠವು ಕೇಂದ್ರ, ಕೇರಳ ಮತ್ತು ಪಶ್ಚಿಮ ಬಂಗಾಳ ರಾಜ್ಯಗಳ ರಾಜ್ಯಪಾಲರಿಗೆ ಅವರ ಕಚೇರಿಗಳು, ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳ ಮೂಲಕ ಮೂರು ವಾರಗಳಲ್ಲಿ ಉತ್ತರಿಸುವಂತೆ ನೋಟಿಸ್ ಜಾರಿ ಮಾಡಿದೆ.

"ಮೂರು ವಾರಗಳಲ್ಲಿ ಉತ್ತರವನ್ನು ಸಲ್ಲಿಸಲಿ ಮತ್ತು ರಾಜ್ಯಗಳಿಂದ ಜಂಟಿ ಟಿಪ್ಪಣಿಯನ್ನು ಸಲ್ಲಿಸಲಿ" ಎಂದು ಸಿಜೆಐ ಹೇಳಿದರು.

ವಿಚಾರಣೆಯ ಸಂದರ್ಭದಲ್ಲಿ, ಮಾಜಿ ಅಟಾರ್ನಿ ಜನರಲ್ (ಎಜಿ) ಮತ್ತು ಕೇರಳ ರಾಜ್ಯದ ಪರ ಹಿರಿಯ ವಕೀಲ ಕೆಕೆ ವೇಣುಗೋಪಾಲ್ ಅವರು ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿದರು, ರಾಜ್ಯಪಾಲರು ಯಾವಾಗ ಹಿಂತಿರುಗಬಹುದು ಎಂಬುದಕ್ಕೆ ಸಂಬಂಧಿಸಿದಂತೆ ಈ ವಿಷಯದ ಬಗ್ಗೆ ನ್ಯಾಯಾಲಯವು ಮಾರ್ಗಸೂಚಿಗಳನ್ನು ಹಾಕುವ ಅಗತ್ಯವಿದೆ ಎಂದು ಹೇಳಿದರು.

"ಮಸೂದೆಗಳಿಗೆ ಒಪ್ಪಿಗೆ ನೀಡುವಲ್ಲಿ ಅವರ ಅಧಿಕಾರಗಳೇನು ಎಂಬ ಬಗ್ಗೆ ದೇಶದ ವಿವಿಧ ರಾಜ್ಯಪಾಲರ ಮನಸ್ಸಿನಲ್ಲಿ ಗೊಂದಲವಿದೆ. ಪ್ರಸ್ತುತ (ಕೇರಳ) ಪ್ರಕರಣದಲ್ಲಿ, ಎಂಟು ಮಸೂದೆಗಳಲ್ಲಿ, ಅವುಗಳಲ್ಲಿ ಎರಡನ್ನು 23 ತಿಂಗಳುಗಳಿಂದ ಬಾಕಿ ಇರಿಸಲಾಗಿದೆ. ಒಬ್ಬರು 15 ತಿಂಗಳು, ಮತ್ತೊಬ್ಬರು 10 ತಿಂಗಳುಗಳ ಕಾಲ ಇರಿಸಿದ್ದು, ಸಾಕಷ್ಟು ಗೊಂದಲ ಮೂಡಿಸಿದೆ" ಇದು ಸಂವಿಧಾನಕ್ಕೆ ವಿರುದ್ಧವಾಗಿದೆ" ಎಂದು ಸರ್ವೋಚ್ಚ ನ್ಯಾಯಾಲಯ ಅಭಿಪ್ರಾಯಪಟ್ಟಿದೆ.

### ಚಿದಂಬರಲೀನ ವೇ.ಬ್ರ. ಶ್ರೀ ಗಣಪತಿಭಟ್ಟ ಜೋಷಿ ವೈಕುಂಠ ಸಮಾರಾಧನೆ ನಿಮಿತ್ತ ನುಡಿ ನಮನ

# ಹೋಗಿ ಬನ್ನಿ ಗುರುಗಳೇ...

ಗದಗ ಜಿಲ್ಲೆಯ ಸೂಡಿ ತನ್ನ ಆಧ್ಯಾತ್ಮಿಕ ಕಾರ್ಯಗಳಿಗಾಗಿ ಜಿಲ್ಲೆಯಲ್ಲಷ್ಟೇ ಅಲ್ಲದೆ ಈ ನಾಡಿನಲ್ಲಿ ಪ್ರಸಿದ್ಧವಾಗಿದೆ. ಐತಿಹಾಸಿಕ ಸ್ಥಳವೂ ಆಗಿರುವ ಈ ಗ್ರಾಮದಲ್ಲಿ ಜ್ಯೋತಿಷ್ಯಶಾಸ್ತ್ರ ಕೋವಿದ, ಪಂಚಾಂಗಕರ್ತ ವೇ.ಬ್ರ. ಶ್ರೀ ರಾಮಭಟ್ಟ ಜೋಷಿಯವರ ಕುಟುಂಬವೂ ಒಂದು. ಊರ ಮಧ್ಯದಲ್ಲಿರುವ ಈ ಕುಟುಂಬದ ಜೋಷಿಯವರ ಮನೆತನವು ವೇ.ಬ್ರ. ಶ್ರೀ ರಾಮಭಟ್ಟರ ಆಶೀರ್ವಾದದಿಂದ ಸೂಡಿಯನ್ನು ಆಧ್ಯಾತ್ಮಿಕ ಮತ್ತು ಜ್ಯೋತಿಷ್ಯದ ಕೇಂದ್ರವನ್ನಾಗಿ ಮಾಡಿದೆ.

ಊರ ಮಧ್ಯದ ಮನೆ ಇಂದು ತನ್ನ ಯಜಮಾನ ವೇ.ಬ್ರ. ಶ್ರೀ ಗಣಪತಿಭಟ್ಟ ಜೋಷಿಯವರನ್ನು ಕಳೆದುಕೊಂಡು ಅನಾಥವಾಗಿ ನಿಂತಿದೆ. ವಯಸ್ಸಾಗಿ, ಏನಾದರೂ ಅನಾರೋಗ್ಯವಾಗಿ, ಬಹು ದಿನಗಳ ಕಾಲ ಹಾಸಿಗೆ ಹಿಡಿದು ಕಣ್ಣ ಮುಂದೆಯೇ ವ್ಯಕ್ತಿ ನಿಧನರಾದರೆ ಆ ಮನೆತನದ ಜನ ಅಷ್ಟೊಂದು ಆಘಾತಕ್ಕೆ ಒಳಗಾಗಲಿಕ್ಕಿಲ್ಲ. ಆದರೆ ಎಲ್ಲವೂ ಚೆನ್ನಾಗಿದ್ದ ವ್ಯಕ್ತಿ ರಾತ್ರಿ ಕಳೆದು ಬೆಳಗಾಗುವದರೊಳಗೆ ಇಲ್ಲ ಎನ್ನುವ ವಿಷಯ ಅವರ ಮನೆಯವರಿಗಷ್ಟೇ ಅಲ್ಲ, ಅವರೊಂದಿಗೆ ಒಡನಾಡಿದವರಿಗೂ ಆಘಾತಕಾರಿ. ಇಂಥದ್ದೊಂದು ಆಘಾತಕಾರಿ ಸಂಗತಿ ಇದೇ ಜುಲೈ 15ರ ರಾತ್ರಿ ನಡೆದು ವೇ.ಬ್ರ.ಶ್ರೀ ಗಣಪತಿಭಟ್ಟರನ್ನು ಚಿದಂಬರಲೀನರನ್ನಾಗಿಸಿತು.

ಮೊಮ್ಮಗಳ ಮದುವೆಯನ್ನು ಮುಗಿಸಿಕೊಂಡು, ದಿ. 15ರಂದು ತಮ್ಮ ಮದುವೆಯ 40ನೇ ವಾರ್ಷಿಕೋತ್ಸವವನ್ನು ಎಲ್ಲ ಸಂಬಂಧಿಕರ ಸಮ್ಮುಖದಲ್ಲಿ ಆಚರಿಸಿಕೊಂಡು ಅತ್ಯಾನಂದದಿಂದ ತಮ್ಮೂರು ಸೂಡಿಗೆ ಮರಳುತ್ತಿದ್ದ ವೇ.ಬ್ರ. ಶ್ರೀ ಗಣಪತಿಭಟ್ಟರ ದಾರಿಯನ್ನು ರಾಜೂರಿನ ಬಳಿ ಜವರಾಯ ಕಾಯುತ್ತ ಕುಳಿತಿದ್ದ. ತಾವು ನಂಬಿದ ಶ್ರೀ ಗಣೇಶನ ಪೂಜೆ ಎಲ್ಲಿ ತಪ್ಪುತ್ತದೆಯೋ ಎಂಬ ಧಾವಂತದಲ್ಲಿ ಸೂಡಿಗೆ ಧಾವಿಸುತ್ತಿದ್ದ ಗಣಪತಿಭಟ್ಟರ ಜೀವವನ್ನು ಅಪಘಾತದ ನೆಪದಲ್ಲಿ ಜವರಾಯ ಕಸಿದುಕೊಂಡು ಹೋದ. ಅಪರಾತ್ರಿಯಲ್ಲಿ ನಡೆದ ಈ ಅಪಘಾತದ ಸುದ್ದಿ ಬೆಳಿಗ್ಗೆ ಏಳುತ್ತಲೆ ಎಲ್ಲರ ಸಂಚಾರಿ ದೂರವಾಣಿಗಳಲ್ಲಿ ರಿಂಗಣಿಸುತ್ತಲೆ ಜನ ಸ್ತಂಭೀಭೂತರಾದರು.

ವೇ.ಬ್ರ.ಶ್ರೀ ಗಣಪತಿಭಟ್ಟರು ಸೂಡಿಯ ಜ್ಯೋತಿಷ್ಯ ಕೇಸರಿಯೆಂದೇ ಬಿರುದಾಂಕಿತರಾದ ವೇ.ಬ್ರ.ಶ್ರೀ ರಾಮಭಟ್ಟರು ಮತ್ತು ಸೌ. ಸೀತಾಬಾಯಿಯವರ ಉದರದಲ್ಲಿ 11 ಸೆಪ್ಟಂಬರ್ 1955ರಂದು ಜನಿಸಿದರು. ಬಿಎ., ಬಿ.ಇಡಿ ಪದವೀಧರರಾದ ಅವರು ಸಂಸ್ಕೃತದಲ್ಲಿ ಸ್ನಾತಕೋತ್ತರ ಪದವಿಯನ್ನು ಪಡೆದುಕೊಂಡರು. 1972ರಿಂದ 1980ರವರೆಗೆ ಎಂಟು ವರ್ಷಗಳ ಕಾಲ ರಾಷ್ಟ್ರ ಪ್ರಶಸ್ತಿ ಪುರಸ್ಕೃತ ವೇ.ಬ್ರ. ಶ್ರೀ ಮಾರ್ತಾಂಡ ದೀಕ್ಷಿತರ ಬಳಿ ಸಂಸ್ಕೃತ ಅಧ್ಯಯನ ಮಾಡಿ ಸೂಡಿಗೆ ಮರಳಿದರು.

ತಂದೆಯನ್ನೇ ಗುರುವಾಗಿರಿಸಿಕೊಂಡು ಅವರಿಂದ ಜ್ಯೋತಿಷ್ಯ ಹಾಗೂ ಪಂಚಾಂಗ ಅಧ್ಯಯನವನ್ನು ಮಾಡಿದರು. ತಾವು ಕಲಿತ ವಿದ್ಯೆಯನ್ನು ಇತರರಿಗೂ ಹಂಚಬೇಕೆನ್ನುವ ಉದಾತ್ತ ಗುರಿಯೊಂದಿಗೆ 1982ರಲ್ಲಿ ಸೂಡಿಯಲ್ಲಿ ಗಜಾನನ ಸಂಸ್ಕೃತ ಪಾಠಶಾಲೆಯನ್ನು ಪ್ರಾರಂಭಿಸಿದರು. ನಂತರ ಇವರ ನೇತೃತ್ವದಲ್ಲಿ ಶ್ರೀ ಚನ್ನಬಸವೇಶ್ವರ ಸಂಸ್ಕೃತ ಪಾಠಶಾಲೆ(1987), ಶ್ರೀ ಬಸವೇಶ್ವರ ಸಂಸ್ಕೃತ ಪಾಠಶಾಲೆ(1991), ಜ್ಞಾನವರ್ಧಿನಿ ಸಂಸ್ಕೃತ ಪಾಠಶಾಲೆ(1994) ಹೀಗೆ ಅನೇಕ ಸಂಸ್ಥೆಗಳನ್ನು ಪ್ರಾರಂಭಿಸಿದರು. ಇದರೊಂದಿಗೆ ವಾಣಿ ಹಿಂದಿ ಮಹಾವಿದ್ಯಾಲಯ(1995), ಶಾರದಾ ಸಂಗೀತ ಪಾಠಶಾಲೆ(1996) ಪ್ರಾರಂಭಿಸಿ ಇತರೆ ಕ್ಷೇತ್ರಗಳಲ್ಲಿಯೂ ತಮಗಿರುವ ಆಸಕ್ತಿಯನ್ನು ಸಾದರಪಡಿಸಿದರು. ಗದಗ ಜಿಲ್ಲೆಯಲ್ಲಿಯೇ ಮೊತ್ತ ಮೊದಲ ಶ್ರೀ ಗಜಾನನ ಸಂಸ್ಕೃತ ಏಕೈಕ ಪದವಿ ಕಾಲೇಜನ್ನು 1997ರಲ್ಲಿ ಸ್ಥಾಪಿಸಿ, ಅದರ ಸಂಸ್ಥಾಪಕ ಪ್ರಾಚಾರ್ಯರಾದರು.



ಶ್ರೀ ದತ್ತಾತ್ರೇಯನ ಶಕ್ತಿ ಪೀಠಗಳಲ್ಲಿ ಒಂದಾಗಿರುವ ನರಸೋಬವಾಡಿಯ ವೇ.ಬ್ರ. ಶ್ರೀ ನಾಗೇಶಭಟ್ಟರು 1999ರಲ್ಲಿ ಒಮ್ಮೆ ಇವರ ಮನೆಗೆ ಆಗಮಿಸಿದ್ದರು. ಮನೆಯ ಬಳಿಯೆ ಇದ್ದ ಪುರಾತನ ಮತ್ತು ಐತಿಹಾಸಿಕ ಶ್ರೀ ಗಣೇಶನ ದರುಶನ ಪಡೆದುಕೊಂಡು ಈ ಗಣೇಶನ ಪೂಜೆಯನ್ನಷ್ಟೆ ಅಲ್ಲದೆ ಪ್ರತಿ ವರ್ಷ ಜಯಂತಿಯನ್ನೂ ಮಾಡಿರಿ ಎಂಬ ಅವರ ಆದೇಶದಂತೆ ಕಳೆದ 25 ವರ್ಷಗಳಿಂದ ಶ್ರೀ ಗಣೇಶ ಜಯಂತಿಯನ್ನು ಅತ್ಯಂತ ಸಡಗರ, ಸಂಭ್ರಮಗಳಿಂದ ಆಚರಿಸುತ್ತ ಬಂದಿದ್ದ ಗಣಪತಿಭಟ್ಟರನ್ನು ಕೊನೆಯ ಕ್ಷಣದಲ್ಲಿ ಆ ಗಣೇಶನೆ ಕೈ ಹಿಡಿಯದಿದ್ದುದು ವಿಧಿಯ ವಿಪರ್ಯಾಸವಲ್ಲದೆ ಮತ್ತೇನೂ ಅಲ್ಲ.

ವೇ.ಬ್ರ. ಶ್ರೀ ಗಣಪತಿಭಟ್ಟ ಜೋಷಿಯವರು ಕೇವಲ ಪಂಚಾಂಗಕರ್ತರು, ಉಪನ್ಯಾಸಕ-ಪ್ರಾಚಾರ್ಯರು ಮಾತ್ರವಲ್ಲದೆ ಕವಿ, ಲೇಖಕರಾಗಿಯೂ ಗುರುತಿಸಿಕೊಂಡಿದ್ದಾರೆ. ನಿವೃತ್ತಿಯ ನಂತರ ಅವರು ಕವಿಗಳಾಗಿ ಅನೇಕ ಕವನಗಳನ್ನು ಬರೆದಿದ್ದಾರೆ. ಅಲ್ಲದೆ ಆಯುರ್ವೇದ ಕಾಲೇಜಿನ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ, ಅವರ ಪಠ್ಯಕ್ರಮಕ್ಕನುಗುಣವಾಗಿ 2019ರಲ್ಲಿ ವೈದ್ಯಕೀಯ ಸುಭಾಷಿತ ಸಾಹಿತ್ಯ, ಪಂಚತಂತ್ರವನ್ನೂ ರಚಿಸಿದ್ದಾರೆ.

2011ರಲ್ಲಿ ಅವರು ರಚಿಸಿದ ಸೊಂಡಿಲಾಪುರ ಶ್ರೀ ಮಹಾಗಣಪತಿ ಪುಸ್ತಕ ಮೂರು ಮುದ್ರಣಗಳನ್ನು ಕಂಡು ಜನಪ್ರಿಯವಾಗಿದೆ. 2020ರಲ್ಲಿ ಲೋಭಾವಿಷ್ಟ ಚಕ್ರಧರ ನಾಟಕ, 2021ರಲ್ಲಿ ಕೆಂಗೇರಿ ತಟ ನಿವಾಸಿ ಪೂರ್ಣಬ್ರಹ್ಮ ಶ್ರೀ ಚಿದಂಬರ ಮಹಾಸ್ವಾಮಿ ಲಘು ಚರಿತ್ರೆ, 2022ರಲ್ಲಿ ಅಶ್ವತ್ಥ ವೃಕ್ಷ ಉಪನಯನ ಹಾಗೂ ವಿವಾಹ ಪ್ರಯೋಗ ಪುಸ್ತಕ ರಚಿಸಿರುವ ಗಣಪತಿ ಭಟ್ಟರು, ಚಿದಂಬರ ಚರಿತ್ರೆಯನ್ನು ನಾಲ್ಕು ಭಾಷೆಗೆ ಭಾಷಾಂತರಿಸಿ, ಪ್ರಕಟಗೊಳಿಸಿದ್ದಾರೆ.

ತಮ್ಮ ಜೀವಿತಾವಧಿಯಲ್ಲಿ ಗಣಪತಿಭಟ್ಟರು ಮಾಡಿರುವ ಅನೇಕ ಉದಾತ್ತ ಕಾರ್ಯಗಳಿಗಾಗಿ ಅವರು ಅನೇಕ ಪ್ರಶಸ್ತಿ/ಪುರಸ್ಕಾರಗಳಿಗೆ ಭಾಜನರಾಗಿದ್ದಾರೆ. 2013ರಲ್ಲಿ ಶ್ರೀ ಕ್ಷೇತ್ರ ಮಂತ್ರಾಲಯದಿಂದ ಸುಯತೀಂದ್ರತೀರ್ಥ ಪುರಸ್ಕಾರ, 2017ರಲ್ಲಿ ರೋಣ ತಾಲೂಕಾ ಕನ್ನಡ ಸಾಹಿತ್ಯ ಸಮ್ಮೇಳನದ ಗೌರವ ಪುರಸ್ಕಾರ, 2022ರಲ್ಲಿ ಸೂಡಿ ಜುಕ್ತಿ ಹಿರೇಮಠದ ಷ.ಬ್ರ. ಶ್ರೀ ಕೊಟ್ಟೂರು ಶಿವಾಚಾರ್ಯರಿಂದ ಗುರುರಕ್ಷಾ ಸಮರ್ಪಣೆ, 2023ರಲ್ಲಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾನಿಲಯದಿಂದ ಬಸವಪ್ಪಯ್ಯ ಶಾಸ್ತ್ರೀ ಪುರಸ್ಕಾರ, ಗುರುವಂದನಾ ಕಾರ್ಯಕ್ರಮದಲ್ಲಿ ಗೌರವ ಸನ್ಮಾನ ಪತ್ರ ಸಮರ್ಪಣೆ, 2024ರಲ್ಲಿ ಮೈಸೂರಿನ ವೇದಶಾಸ್ತ್ರ ಪೋಷಣಾ ಸಭಾದಿಂದ ವೈದಿಕ ಪ್ರಯೋಗ ನಿಷ್ಣಾತ ಇತ್ಯಾದಿ ಗೌರವಗಳಿಗೆ ವೇ. ಬ್ರ. ಶ್ರೀ ಗಣಪತಿಭಟ್ಟರು ಭಾಜನರಾಗಿದ್ದಾರೆ.

ಸಂಸ್ಕೃತ ಭಾಷೆಯ ಪ್ರಚಾರಕ್ಕಾಗಿ ತಮ್ಮನ್ನು ತಾವು ಸಂಪೂರ್ಣವಾಗಿ ಅರ್ಪಿಸಿಕೊಂಡಿದ್ದ ಗಣಪತಿಭಟ್ಟರು, 100ಕ್ಕೂ ಹೆಚ್ಚು ಉಚಿತ ಸಂಸ್ಕೃತ ಸಂಭಾಷಣಾ ಶಿಬಿರಗಳನ್ನು ಏರ್ಪಡಿಸಿದ್ದಾರೆ. ಶಾಲಾ ಮಕ್ಕಳಿಗೆ ಪ್ರತಿ ವರ್ಷವೂ ಬ್ಯಾಗ್, ಪುಸ್ತಕ ಮತ್ತು ಪೆನ್‌ಗಳನ್ನು ನೀಡಿ ಆಶೀರ್ವದಿಸುತ್ತಿದ್ದರು. ಜನ ಬಯಸಿದಾಗ ಅವರಿಗೆ ಸಾಂದರ್ಭಿಕ ವೈದ್ಯಕೀಯ ನೆರವನ್ನೂ ನೀಡಿದ್ದ ಗಣಪತಿಭಟ್ಟರು ನಾಡಿನ ಹಲವೆಡೆಗಳಲ್ಲಿ ನೀಡಿದ ತಮ್ಮ ಉಪನ್ಯಾಸಗಳ ಮೂಲಕ ಜನಪ್ರಿಯರಾಗಿದ್ದರು.

ಯಲಗೂರಿನ ಸೌ. ಶಾರದಾಬಾಯಿಯವರನ್ನು ಅವರು ಎಂದು ವಿವಾಹವಾಗಿದ್ದರೋ(15/07/1983) ಸರಿಯಾಗಿ 40 ವರ್ಷಗಳ ಬಳಿಕ ಅದೇ ದಿನಾಂಕಕ್ಕೆ ಅವರು ನಮ್ಮನ್ನಗಲುತ್ತಾರೆ ಎಂದು ಯಾರೂ ಎಣಿಸಿರಲಿಲ್ಲ. ಇಂದು ಶ್ರೀಗಳವರ ವೈಕುಂಠ ಸಮಾರಾಧನೆ ಸೂಡಿಯ ಅವರ ಸ್ವಗ್ರಾಮದಲ್ಲಿ ನಡೆಯಲಿದೆ. ಹೋಗಿ ಬನ್ನಿ ಗುರುಗಳೆ, ನಿಮ್ಮನ್ನು ನಂಬಿದ್ದ ಭಕ್ತರೆಲ್ಲರ ಪರವಾಗಿ ನಿಮಗೆ ಹೃತ್ಪೂರ್ವಕ, ಗೌರವಪೂರ್ವಕ ನಮನಗಳು.

-ಅರುಣ ಬಿ. ಕುಲಕರ್ಣಿ.
ನರೇಗಲ್ಲ-ಕೋಡಿಕೊಪ್ಪ.

# ಗ್ಯಾರಂಟಿ ಯೋಜನೆಗಳಿಗೆ ಪರಿಶಿಷ್ಟರ ನಿಧಿ ಬಳಕೆ: ಸದನ ಸಮಿತಿ ಆಕ್ಷೇಪ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಪರಿಶಿಷ್ಟ ಜಾತಿಗಳ ಉಪ ಯೋಜನೆ (ಎಸ್‌ಸಿಎಸ್‌ಪಿ) ಪರಿಶಿಷ್ಟ ಪಂಗಡಗಳ ಯೋಜನೆ (ಟಿಎಸ್‌ಪಿ) ನಿಧಿಯನ್ನು ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡುತ್ತಿರುವುದಕ್ಕೆ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಕಲ್ಯಾಣ ಸಮಿತಿ ಆಕ್ಷೇಪ ವ್ಯಕ್ತಪಡಿಸಿದೆ.

ಗುರುವಾರ ವಿಧಾನಮಂಡಲದ ಉಭಯ ಸದನಗಳಲ್ಲಿ ಮಂಡಿಸಿದ ಸಮಿತಿಯ ಮೂರನೇ ವರದಿಯಲ್ಲಿ ಆಕ್ಷೇಪ ಇದೆ.

ಐದು ಗ್ಯಾರಂಟಿ ಯೋಜನೆಗಳಿಗೆ 14,730.53 ಕೋಟಿ ರೂಪಾಯಿ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ನಿಧಿಯನ್ನು ಬಸಿಕೊಳ್ಳುತ್ತಿರುವುದಕ್ಕೆ ಕಾಂಗ್ರೆಸ್ ಸರ್ಕಾರ ಈಗಾಗಲೇ ಟೀಕೆಗೆ ಗುರಿಯಾಗಿದೆ.

"ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ನಿಧಿಯನ್ನು ಐದು ಗ್ಯಾರಂಟಿಗಳಲ್ಲಿ ಒಂದಾದ ಮಹಿಳೆಯರ ಉಚಿತ ಬಸ್ ಪ್ರಯಾಣ ಯೋಜನೆ 'ಶಕ್ತಿ' ಹಾಗೂ ವಿದ್ಯಾರ್ಥಿನಿಯರ ಉಚಿತ ಬಸ್ ಪಾಸ್‌ನಂತಹ ಕಾರ್ಯಕ್ರಮಗಳಿಗೆ ಬಳಸಲಾಗುತ್ತಿದೆ. ಎಲ್ಲಾ ಸಮುದಾಯಗಳ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್‌ಗಳನ್ನು ನೀಡಲಾಗುತ್ತಿದೆ. ಈ ಉದ್ದೇಶಕ್ಕೆ ಪರಿಶಿಷ್ಟರಿಗೆ ಮೀಸಲಾದ ಹಣವನ್ನು ಬಳಸುವುದು ಕಾನೂನು ಉಲ್ಲಂಘನೆ ಮತ್ತು ದುರುಪಯೋಗವಾಗಿದೆ. ವಿವಿಧ ಕಾರ್ಯಕ್ರಮಗಳನ್ನು ರೂಪಿಸುವ ಮೂಲಕ ಪರಿಶಿಷ್ಟರ ಹಣವನ್ನು ಅವರಿಗೇ ಬಳಸಬೇಕು" ಎಂದು ಮಳವಳ್ಳಿ ಶಾಸಕ ಪಿ.ಎಂ ನರೇಂದ್ರಸ್ವಾಮಿ ಅಧ್ಯಕ್ಷತೆಯ ಸಮಿತಿ ಆಗ್ರಹಿಸಿದೆ.

ವರದಿಯ ಪ್ರಕಾರ ಎಸ್‌ಸಿ/ಎಸ್‌ಟಿಗಳಿಗೆ ಪ್ರತ್ಯೇಕವಾಗಿ ಕಾರ್ಯಕ್ರಮಗಳನ್ನು ರೂಪಿಸಲು ಸಾಧ್ಯವಿಲ್ಲ. ಬಸ್‌ಗಳಲ್ಲಿ ಪ್ರಯಾಣಿಸುವವರು ಹೆಚ್ಚಾಗಿ ಬಡವರು ಮತ್ತು ಎಸ್‌ಸಿ / ಎಸ್‌ಟಿಗಳೇ ಎಂದು ಎಂದು ಸಾರಿಗೆ ಇಲಾಖೆ ಸಮಿತಿಗೆ ತಿಳಿಸಿದೆ. ಇಲಾಖೆಯ ಈ ವಾದವನ್ನು ಸಮಿತಿಯು ವಿರೋಧಿಸಿದೆ.


"ಕಳೆದ 10 ವರ್ಷಗಳಿಂದ ಎಸ್‌ಸಿಎಸ್‌ಪಿ ಮತ್ತು ಟಿಎಸ್‌ಪಿ ಹಣವನ್ನು ಕಾನೂನು ಉಲ್ಲಂಘಿಸಿ ಬಳಸಲಾಗುತ್ತಿದೆ. ಇದು ಶಿಕ್ಷಾರ್ಹವಾಗಿದೆ. ಸಮಾಜ ಕಲ್ಯಾಣ ಇಲಾಖೆಯಡಿ ಹಾಸ್ಟೆಲ್‌ಗಳಲ್ಲಿ ಮೂಲ ಸೌಕರ್ಯ ಮತ್ತು ವಿದ್ಯಾರ್ಥಿವೇತನವನ್ನು ಒದಗಿಸಲು ಹಣವನ್ನು ಬಳಸಬೇಕು "ಎಂದು ಸಮಿತಿಯು ಹಣಕಾಸು ಇಲಾಖೆಗೆ ತನ್ನ ಶಿಫಾರಸಿನಲ್ಲಿ ಹೇಳಿದೆ.

ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳು ಎಸ್‌ಸಿಎಸ್‌ಪಿ-ಟಿಎಸ್‌ಪಿ ಹಣವನ್ನು ಹೆಚ್ಚಿನ ಇಲಾಖೆಗಳ ಸಾಮಾನ್ಯ ಯೋಜನೆಗಳಿಗೆ ಬಳಸುತ್ತಿದ್ದಾರೆ ಎಂದು ನರೇಂದ್ರಸ್ವಾಮಿ ಸಮಿತಿ ಹೇಳಿದೆ.

### ಮಾನನಷ್ಟ ಮೊಕದ್ದಮೆ ಪ್ರಕರಣ

# 'ರಾಜಕೀಯ ದುರುದ್ದೇಶದಿಂದ ಸುಳ್ಳು ಆರೋಪ..' ಎಂದ ರಾಹುಲ್ ಗಾಂಧಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಯವರು ಇಂದು ಮಾನನಷ್ಟ ಮೊಕದ್ದಮೆ ಸಂಬಂಧ, ಉತ್ತರ ಪ್ರದೇಶ ಸಂಸದ-ಶಾಸಕ ನ್ಯಾಯಾಲಯದಲ್ಲಿ ತಮ್ಮ ಹೇಳಿಕೆಯನ್ನು ದಾಖಲಿಸಿದ್ದಾರೆ. "ಆರೋಪಗಳು ಸುಳ್ಳು ಮತ್ತು ರಾಜಕೀಯ ದುರುದ್ದೇಶದಿಂದ ದಾಖಲಿಸಲಾಗಿದೆ" ಎಂದು ಲೋಕಸಭೆಯ ವಿರೋಧ ಪಕ್ಷದ ನಾಯಕರು ನ್ಯಾಯಾಲಯದ ಮುಂದೆ ಹೇಳಿದರು. ಆಗಸ್ಟ್ 12 ರಂದು ಮತ್ತೆ ಪ್ರಕರಣವನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಕೋರ್ಟ್ ಹೇಳಿದೆ.

ಆಗಸ್ಟ್ 4, 2018 ರಂದು ಸ್ಥಳೀಯ ಭಾರತೀಯ ಜನತಾ ಪಾರ್ಟಿ (ಬಿಜೆಪಿ) ನಾಯಕ ವಿಜಯ್ ಮಿಶ್ರಾ ಅವರು ದಾಖಲಿಸಿದ ಮಾನನಷ್ಟ ಮೊಕದ್ದಮೆಯಲ್ಲಿ, ರಾಹುಲ್ ಗಾಂಧಿ ಅವರು ಆಗಿನ ಬಿಜೆಪಿ ಅಧ್ಯಕ್ಷ ಮತ್ತು ಪ್ರಸ್ತುತ ಗೃಹ ಸಚಿವ ಅಮಿತ್ ಶಾ ಅವರ ಬಗ್ಗೆ ಆಕ್ಷೇಪಾರ್ಹ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಆರೋಪಿಸಿದ್ದಾರೆ.

ಫೆಬ್ರವರಿ 20 ರಂದು ಈ ಪ್ರಕರಣದಲ್ಲಿ ರಾಹುಲ್ ಗಾಂಧಿಗೆ ನ್ಯಾಯಾಲಯ ಜಾಮೀನು ನೀಡಿದೆ. ವಿಶೇಷ ಮ್ಯಾಜಿಸ್ಟ್ರೇಟ್ ಶುಭಂ ವರ್ಮಾ ಅವರು ಜುಲೈ 26 ರಂದು ತಮ್ಮ ಹೇಳಿಕೆಯನ್ನು ದಾಖಲಿಸಲು ಗಾಂಧಿಗೆ ಸಮನ್ಸ್ ನೀಡಿದ್ದರು.

"ರಾಹುಲ್ ಗಾಂಧಿ ಅವರು ನ್ಯಾಯಾಲಯದಲ್ಲಿ ತಮ್ಮ ಹೇಳಿಕೆಯನ್ನು ದಾಖಲಿಸಿದ್ದಾರೆ ಮತ್ತು ಎಲ್ಲಾ ಆರೋಪಗಳು ಸುಳ್ಳು ಮತ್ತು ರಾಜಕೀಯ ದುರುದ್ದೇಶದಿಂದ ದೂರು ದಾಖಲಿಸಲಾಗಿದೆ ಎಂದು ಹೇಳಿದರು.

### ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಪ್ರಸಾದ್ ಅಬ್ಬಯ್ಯರೊಂದಿಗೆ ಚರ್ಚೆ

# ಲ್ಯಾಂಡ್ ಬ್ಯಾಂಕ್ ಜಾರಿಗೆ ಸರ್ಕಾರದಿಂದ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ಗದಗ

ಸ್ಲಂ ಜನಾಂದೋಲನ ಕರ್ನಾಟಕ ರಾಜ್ಯ ಸಮಿತಿ ವತಿಯಿಂದ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಪ್ರಸಾದ್ ಅಬ್ಬಯ್ಯನವರನ್ನು ಭೇಟಿ ಮಾಡಿ, ರಾಜ್ಯದ ಸ್ಲಂ ನಿವಾಸಿಗಳ ಬೇಡಿಕೆಗಳು ಹಾಗೂ ಕುಂದು-ಕೊರತೆ ಸಭೆ ಕರೆಯಲು ಸಮಾಲೋಚನೆ ನಡೆಸಲಾಯಿತು.

ಸ್ಲಂ ಜನಾಂದೋಲನ ಕರ್ನಾಟಕ ವಿವಿಧ ಹಕ್ಕೊತ್ತಾಯಗಳಾದ ಸಮಗ್ರ ಸ್ಲಂ ಅಭಿವೃದ್ಧಿ ಕಾಯಿದೆ, ರಾಜ್ಯ ಸ್ಲಂ ನಿವಾಸಿಗಳಿಗೆ ಹಕ್ಕುಪತ್ರಗಳ ವಿತರಣೆ ಮತ್ತು ಕ್ರಯಪತ್ರಗಳ ಪ್ರಕ್ರಿಯೆ ಚುರುಕುಗೊಳಿಸುವುದು, ಕೊಳಚೆ ಪ್ರದೇಶಗಳ ಘೋಷಣೆಗೆ ಎದುರಾಗಿರುವ ತೊಡಕುಗಳನ್ನು ಸರಿಪಡಿಸುವುದು ಮತ್ತು ಖಾಸಗಿ ಮಾಲೀಕತ್ವದ ಕೊಳಚೆ ಪ್ರದೇಶಗಳನ್ನು ಘೋಷಿಸಲು ಇರುವ ತೊಡಕನ್ನು ನಿವಾರಿಸುವುದು, ರಾಜ್ಯ ಸರ್ಕಾರದಿಂದ ಮುಖ್ಯಮಂತ್ರಿಗಳ ವಸತಿ ಯೋಜನೆ ಜಾರಿ ಸ್ಲಂ ನಿವಾಸಿಗಳ ಫಲಾನುಭವಿ ವಂತಿಕೆಯನ್ನು ಕಡಿತ ಮಾಡುವುದು ಸೇರಿದಂತೆ ನಗರ ಲ್ಯಾಂಡ್ ಬ್ಯಾಂಕ್ ನೀತಿ ಜಾರಿಗೊಳಿಸಿ



ಜಿಲ್ಲಾ ಮಟ್ಟದಲ್ಲಿ 2016ರ ನೀತಿಯನ್ನು ಜಾರಿಗೊಳಿಸಲು ಒತ್ತಾಯಿಸಲಾಯಿತು.

ಪ್ರಸಾದ್ ಅಬ್ಬಯ್ಯ ಮನವಿ ಸ್ವೀಕರಿಸಿ ಮಾತನಾಡಿ, ರಾಜ್ಯ ಸರ್ಕಾರದಿಂದ ಘೋಷಿತ ಪ್ರದೇಶಗಳನ್ನು ಸಮಗ್ರವಾಗಿ ಅಭಿವೃದ್ಧಿಗೊಳಿಸಲು ಚಿಂತಿಸುತ್ತಿದೆ. ಇದಕ್ಕಾಗಿ ಮುಖ್ಯಮಂತ್ರಿಗಳಿಗೆ ಸ್ಲಂ ಜನಸಂಖ್ಯೆಗೆ ಅನುಗುಣವಾಗಿ ಬಜೆಟ್‌ನಲ್ಲಿ ಪಾಲು, ಸ್ಥಳೀಯ ಸಂಸ್ಥೆಗಳಲ್ಲಿ ಸೆಸ್ ಸಂಗ್ರಹ ಮಾಡಿ ಕೊಳಚೆ ಪ್ರದೇಶಗಳಿಗೆ ಮೂಲಭೂತ ಸೌಲಭ್ಯ ಕಲ್ಪಿಸಲು ಮುಂದಾಗುತ್ತಿದ್ದೇವೆ. ರಾಜ್ಯ ಸರ್ಕಾರವೇ ವಸತಿ ಯೋಜನೆಗೆ ಹೊಸ ಹೆಸರನ್ನು ಘೋಷಿಸಲಿದೆ ಎಂದರು.

ಈ ಸಂದರ್ಭದಲ್ಲಿ ರಾಜ್ಯ ಸಂಚಾಲಕ ಇಮ್ತಿಯಾಜ್ ಮಾನ್ವಿ, ಪದಾಧಿಕಾರಿಗಳಾದ ಜನಾರ್ಧನ್ ಹಳ್ಳಿಬೆಂಚಿ, ಶೋಭಾ ಕಮತಾರ್, ಅರುಣಾ, ರೇಣುಕಾ ಎಲ್ಲಮ್ಮ, ವೆಂಕಮ್ಮ, ರೇಣುಕಾ ಸರಡಗಿ, ಸುಧಾ, ಬೆಂಗಳೂರು ಸಮಿತಿಯ ಮಂಜುಬಾಯಿ, ಹಣಮಂತ, ಶಿವಕುಮಾರ್, ರಾಘವೇಂದ್ರ ಉಪಸ್ಥಿತರಿದ್ದರು.

2023ರಲ್ಲಿ ನಡೆದ ವಿಧಾನ ಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಪ್ರಣಾಳಿಕೆಯಲ್ಲಿ ಸ್ಲಂ ನಿವಾಸಿಗಳಿಗೆ ಘೋಷಿಸಿರುವ ಭರವಸೆಗಳನ್ನು ಈಡೇರಿಸಲು ಒತ್ತಾಯಿಸಿ ರಾಜ್ಯ ಸಮಾವೇಶವನ್ನು ಹುಬ್ಬಳ್ಳಿ ಅಥವಾ ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗುವುದು. ಕೇಂದ್ರದ ನಗರಾಭಿವೃದ್ಧಿ ಮತ್ತು ನಗರ ಬಡತನ ಹಾಗೂ ವಸತಿ ಯೋಜನೆಗಳು ಕಾರ್ಪೋರೇಟ್ ಆಧಾರಿತ ದೃಷ್ಟಿಕೋನವನ್ನು ಹೊಂದಿದ್ದು ಸ್ಲಂ ಜನರು ನಗರಗಳ ಮೇಲೆ ಹಕ್ಕುಸ್ಥಾಪಿಸಲು ಆಂದೋಲನವನ್ನು ಕೈಗೊಳ್ಳಲಾಗುವುದೆಂದು ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಂಚಾಲಕರಾದ ಎ.ನರಸಿಂಹಮೂರ್ತಿ ಹೇಳಿದರು.

### ಅಮ್ಮಿನಭಾವಿಯಲ್ಲಿ ನಡೆದ ಡೆಂಘೀ ಜಾಗೃತಿ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಡೆಂಘೀ ಜ್ವರಕ್ಕೆ ತಿಳುವಳಿಕೆಯೇ ಮದ್ದು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಡೆಂಘೀ ರೋಗದ ಆತಂಕ ಬೇಡ. ಅದರಲ್ಲೂ ಸಾರ್ವಜನಿಕರು ಒಗ್ಗಟ್ಟಾಗಿ ನಿಯಂತ್ರಣಕ್ಕೆ ಕೈ ಜೋಡಿಸಿದರೆ ಬಹುಬೇಗ ನಿಯಂತ್ರಣಕ್ಕೆ ಬರಲಿದೆ. ಬೆಳಿಗ್ಗೆ ಸಮಯದಲ್ಲಿಯೇ ಡೆಂಘೀ ರೋಗ ತರುವ ಸೊಳ್ಳೆ ಕಚ್ಚಲಿದ್ದು, ಜನರು ಎಚ್ಚರ ವಹಿಸಬೇಕು. ಜ್ವರ ಬಂದರೆ ತಪ್ಪದೇ ವೈದ್ಯರನ್ನು ಸಂಪರ್ಕಿಸಬೇಕು. ಡೆಂಘೀ ಖಾಯಿಲೆ ಪ್ರತಿ ಮಳೆಗಾಲದಲ್ಲಿಯೂ ಅನೈರ್ಮಲ್ಯ ಸ್ಥಳಗಳಲ್ಲಿ, ಅನಗತ್ಯ ನೀರು ಸಂಗ್ರಹಣ ಸ್ಥಳಗಳಲ್ಲಿ ಕಾಣಿಸುತ್ತದೆ. ಡೆಂಘೀ ಖಾಯಿಲೆ ಬಗ್ಗೆ ಭಯ, ಆತಂಕ ಬೇಡ. ತಿಳುವಳಿಕೆ, ಮುಂಜಾಗೃತೆ ವಹಿಸುವುದೇ ಇದಕ್ಕೆ ಮದ್ದು ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಶುಕ್ರವಾರ ಬೆಳಿಗ್ಗೆ ಅಮ್ಮಿನಭಾವಿ ಗ್ರಾಮದ ವಾಲ್ಮೀಕಿ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಮತ್ತು ಜಿಲ್ಲಾ ಆರೋಗ್ಯ ಇಲಾಖೆ ಸಂಯುಕ್ತವಾಗಿ ಆಯೋಜಿಸಿದ್ದ ಸೊಳ್ಳೆ ನಿರ್ಮೂಲನಾ ದಿನಾಚರಣೆ ಹಾಗೂ ಡೆಂಘೀ ನಿಯಂತ್ರಣ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಡೆಂಘೀ ನಿಯಂತ್ರಣ ಮತ್ತು ನಿರ್ಮೂಲನೆ ನಮ್ಮೆಲ್ಲರ ಕೈಯಲ್ಲಿದೆ. ನಮ್ಮ ಮನೆ ಹಾಗೂ ಮನೆ ಸುತ್ತಮುತ್ತ ನೀರು ಶೇಖರಣೆ ಆಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಮನೆಯಲ್ಲಿ ಬಳಕೆಗೆ, ಕುಡಿಯಲು ಸಂಗ್ರಹಿಸುವ ನೀರಿನ ತೊಟ್ಟಿ ಹಾಗೂ ಸಂಗ್ರಹ ಪರಕರಗಳನ್ನು ಮುಚ್ಚಬೇಕು. ಇಷ್ಟು ಜಾಗೃತಿ ವಹಿಸಿದರೆ ಡೆಂಘೀ ಮುಕ್ತರಾಗುಬಹುದು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.



ಜ್ವರ ಬಂದ ತಕ್ಷಣ ನಿರ್ಲಕ್ಷ್ಯ ತೋರದೆ ಆಸ್ಪತ್ರೆಗೆ ತೋರಿಸಬೇಕು. ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಡೆಂಘೀ ಸೇರಿದಂತೆ ಎಲ್ಲ ಖಾಯಿಲೆಗಳಿಗೆ ರಕ್ತ ಪರೀಕ್ಷೆ, ಚಿಕಿತ್ಸೆ ಉಚಿತವಾಗಿದೆ. ಖಾಸಗಿ ಆಸ್ಪತ್ರೆ ಹಾಗೂ ಪ್ರಯೋಗಾಲಯಗಳಿಗೆ ಶುಲ್ಕ ರೂ. 300 ನಿಗದಿ ಮಾಡಿ ಸರಕಾರ ಆದೇಶಿಸಿದೆ. ಡೆಂಘೀ ರಕ್ತ ಪರೀಕ್ಷೆ ದರಗಳನ್ನು ಆಸ್ಪತ್ರೆ ಹಾಗೂ ಪ್ರಯೋಗಾಲಯಗಳಲ್ಲಿ ಎದ್ದು ಕಾಣುವಂತೆ ಪ್ರಕಟಿಸಲು ಜಿಲ್ಲಾಡಳಿತ ನಿರ್ದೇಶಿಸಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಮ್ಮಿನಭಾವಿ ಗ್ರಾ.ಪಂ ಅಧ್ಯಕ್ಷೆ ನೀಲಮ್ಮ ತಿದಿ ವಹಿಸಿ ಮಾತನಾಡಿದರು. ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಶಶಿ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಬಿ.ಡಿ. ಚೆವರಡ್ಡಿ ಸ್ವಾಗತಿಸಿದರು. ಅಂಗನವಾಡಿ ಶಿಕ್ಷಕಿ ಸವಿತಾ ಅಂಗಡಿ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

ಜಿಲ್ಲಾ ಮಲೇರಿಯಾ ಅಧಿಕಾರಿ ಡಾ. ಮಂಜುನಾಥ ಸೊಪ್ಪಿಮಠ, ಅಮ್ಮಿನಭಾವಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸ್ಥಾನಿಕ ವೈದ್ಯಾಧಿಕಾರಿ ಡಾ. ಬೀನಾ ಶೂರ್ಪಾಲಿ, ಅಮ್ಮಿನಭಾವಿ ಗ್ರಾಮ ಪಂಚಾಯತಿ ಸದಸ್ಯರು, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು, ಶಾಲಾ ವಿದ್ಯಾರ್ಥಿಗಳು, ಸ್ತ್ರೀಶಕ್ತಿ ಸಂಘಗಳ ಸದಸ್ಯರು, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಡೆಂಘೀ ಶಂಕಿತರ ಮತ್ತು ಪಾಸಿಟಿವ್ ಇರುವವರ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆ, ಕಿಮ್ಸ್ ಮತ್ತು ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಲಭ್ಯತೆಗೆ ಅನುಗುಣವಾಗಿ ಡೆಂಘೀ ರೋಗಿಗಳಿಗಾಗಿ ಪ್ರತ್ಯೇಕ ಹಾಸಿಗೆಗಳನ್ನು ಕಾಯ್ದಿರಿಸಲಾಗಿದೆ. ಅಗತ್ಯ ಔಷಧಿ ಸಹ ಸಂಗ್ರಹ ಮಾಡಲಾಗಿದೆ. ಜಿಲ್ಲೆಯಲ್ಲಿ ಡೆಂಘೀ ನಿಯಂತ್ರಣದಲ್ಲಿದ್ದು, ಪ್ರಕರಣಗಳ ಸಂಖ್ಯೆ ಇಳಿಮುಖವಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.



## ಶ್ರೀ ಚನ್ನವೀರ ಶರಣರ 29ನೇ ಪುಣ್ಯಸ್ಮರಣೋತ್ಸವ




■ ವಿಜಯಸಾಕ್ಷಿ ಸುದ್ದಿ, ಗದಗ

ಮೌನ ತಪಸ್ವಿ ಚಿಕೇನಕೊಪ್ಪದ ಪೂಜ್ಯಶ್ರೀ ಚನ್ನವೀರ ಶರಣರ 29ನೇ ಪುಣ್ಯ ಸ್ಮರಣೋತ್ಸವ ಜುಲೈ 28ರಂದು ಬೆಳಿಗ್ಗೆ 10 ಗಂಟೆಗೆ ಬೆಂಗಳೂರಿನ ಆನಂದರಾವ್ ಸರ್ಕಲ್‌ನಲ್ಲಿರುವ ಜ. ರೇಣುಕಾಚಾರ್ಯ ವಿದ್ಯಾಸಂಸ್ಥೆಯಲ್ಲಿ ಜರುಗುವುದು.

ಕಾರ್ಯಕ್ರಮದ ಪಾವನ ಸನ್ನಿಧಾನವನ್ನು ಬಳಗಾನೂರು ಸುಕ್ಷೇತ್ರದ ಪೂಜ್ಯಶ್ರೀ ಶಿವಶಾಂತ ವೀರಶರಣರು ವಹಿಸುವರು. ಬೆಂಗಳೂರಿನ ಲೇಖಕಿ ಹಾಗೂ ಚಿಂತಕಿ ವೀಣಾ ಬನ್ನಂಜೆ ಉಪನ್ಯಾಸ ನೀಡುವರು. ಬೆಂಗಳೂರಿನ ಗಾನ ಸಿದ್ದಗಂಗಾ ಸಂಗೀತ ವಿದ್ಯಾಲಯದ ಸಂಸ್ಥಾಪಕಿ ಗೀತಾ ಭತ್ತದ ಹಾಗೂ ತಂಡದವರಿಂದ ಭಕ್ತಿ ಸಂಗೀತ ಜರುಗುವುದು. ಬೆಂಗಳೂರಿನ ಆಕಾಶವಾಣಿ ಕಲಾವಿದೆ ಸವಿತಾ ಶಿವಕುಮಾರ ಕಾರ್ಯಕ್ರಮ ನಿರೂಪಿಸುವರು ಎಂದು ಸ್ವಾಗತ ಸಮಿತಿಯ ಗೌರವಾಧ್ಯಕ್ಷರು ಹಾಗೂ ವಿಧಾನ ಪರಿಷತ್ತಿನ ಮಾಜಿ ಸದಸ್ಯರಾದ ಅಲ್ಲಮ ವೀರಭದ್ರಪ್ಪನವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಾ. ವ್ಹಿ.ವ್ಹಿ. ಹಿರೇಮಠರಿಗೆ 'ಚಾಲುಕ್ಯ ಸೇವಾರತ್ನ' ಪ್ರಶಸ್ತಿ

■ ವಿಜಯಸಾಕ್ಷಿ ಸುದ್ದಿ, ಗದಗ



ಅಶ್ವಿನಿ ಪ್ರಕಾಶನ, ಡಾ. ವ್ಹಿ.ಬಿ. ಹಿರೇಮಠ ಮೆಮೋರಿಯಲ್ ಪ್ರತಿಷ್ಠಾನದ ಅಧ್ಯಕ್ಷರಾದ ಡಾ. ವ್ಹಿ.ವ್ಹಿ. ಹಿರೇಮಠರಿಗೆ ಬಾದಾಮಿಯ 'ಚಾಲುಕ್ಯ ಸೇವಾರತ್ನ' ಪ್ರಶಸ್ತಿ ಸಂದಿದೆ.

ಯುಕ್ತಿ-ಶಕ್ತಿಗಳನ್ನು ಮೇಳೈಸಿಕೊಂಡು ಸದಾ ಕಾಯಕದಲ್ಲಿ ತೊಡಗಿಸಿಕೊಂಡು ಯಶಸ್ಸು ಹೊಂದುತ್ತಾ ಸಾಗುತ್ತಿರುವ ಡಾ. ವ್ಹಿ.ವ್ಹಿ. ಹಿರೇಮಠರಿಗೆ ಜುಲೈ 28ರಂದು ಬಾದಾಮಿ ಜಾನಪದ ಸಂಭ್ರಮ ಕಾರ್ಯಕ್ರಮದಲ್ಲಿ ಡಾ. ವ್ಹಿ.ವ್ಹಿ. ಹಿರೇಮಠರಿಗೆ ಗೌರವಪೂರ್ವಕವಾಗಿ ಪ್ರಶಸ್ತಿ ನೀಡಿ ಗೌರವಿಸಲಾಗುವುದು ಎಂದು ಸಂಸ್ಥೆಯ ಮಕ್ಕಳ ಸಾಹಿತ್ಯ ಪರಿಷತ್‌ನ ತಾಲೂಕಾಧ್ಯಕ್ಷ ಡಾ.ನಾಗರಾಜ ತಂಬ್ರಳ್ಳಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.



ನಗರಸಭಾ ಸದಸ್ಯ ಚಂದ್ರು ಪ.ಕರಿಸೋಮನಗೌಡ್ರ ಇವರ ನೇತೃತ್ವದಲ್ಲಿ ಬೆಟಗೇರಿ ಪೊಲೀಸ್ ಠಾಣೆಗೆ ನೂತನವಾಗಿ ಪಿಎಸ್‌ಐ ಆಗಿ ನೇಮಕಗೊಂಡ ಲಕ್ಷ್ಮಪ್ಪ ಎಂ.ಆರಿ ಅವರನ್ನು ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಶಫಿ ನವಲಗುಂದ, ಮಲಕಾಜಿ ಕಲ್ಮನಿ, ರಾಘು ಕಾಂಬಳೆ, ಬಾಪುಜಿ ಪುಣೇಕರ, ಪ್ರಭುಗೌಡ್ರ, ಶ್ರೀಕಾಂತ ಮಳಲಿ, ವೀರೇಶ ಪಲ್ಲೇದ, ರಾಜು ಅಣ್ಣಿಗೇರಿ, ಮಲ್ಲು ಬಾರಕೇರ, ಸಾಧಿಕ ಬಳ್ಳಾರಿ, ಅಕ್ರಮ್, ಸದ್ದಾಂ, ಸಿಕಂದರ, ರಮೇಶ, ಅಜುರುದ್ದೀನ ಮೂಲಿಮನಿ ಮುಂತಾದವರು ಇದ್ದರು.

## ಡೆಂಘೀ ನಿಯಂತ್ರಣ ಅರಿವು ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಡೆಂಘೀ ಜ್ವರವು ಸೊಳ್ಳೆಯಿಂದ ಹರಡುವ ಸಾಂಕ್ರಾಮಿಕ ರೋಗವಾಗಿದೆ. ಮಕ್ಕಳು ಸೊಳ್ಳೆಗಳ ಬಗ್ಗೆ ಎಚ್ಚರಿಕೆಯಿಂದ ಇರಬೇಕೆಂದು ಕವಿತಾ ಬೇಲೇರಿ ಹೇಳಿದರು.

ಅವರು ಗದುಗಿನ ಸರಕಾರಿ ಹಿ.ಪ್ರಾ.ಕ. ಗಂಡುಮಕ್ಕಳ ಶಾಲೆ ನಂ. 15ರಲ್ಲಿ ಡೆಂಘೀ ಜ್ವರದ ಕುರಿತು ವಿದ್ಯಾರ್ಥಿಗಳಿಗೆ ಏರ್ಪಡಿಸಿದ್ದ ಅರಿವು ಕಾರ್ಯಕ್ರಮದಲ್ಲಿ ಮಾತನಾಡಿದರು.

ಈಡಿಸ್ ಎಂಬ ಹೆಣ್ಣು ಸೊಳ್ಳೆಯಿಂದ ಡೆಂಘೀ ಹರಡುತ್ತಿದ್ದು, ಸೊಳ್ಳೆಗಳ ಕಡಿತದಿಂದ ನಮ್ಮನ್ನು ನಾವು ರಕ್ಷಿಸಿಕೊಳ್ಳಬೇಕು. ನಿಂತ ನೀರಿನ ಎಲ್ಲ ಮೂಲಗಳನ್ನು ಸ್ವಚ್ಛಗೊಳಿಸಬೇಕು, ಸೊಳ್ಳೆ ಪರದೆಗಳನ್ನು ಉಪಯೋಗಿಸಬೇಕೆಂದರು.



ಶಿಕ್ಷಕಿ ಪಿ.ಎಸ್. ಬ್ಯಾಳಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಡೆಂಗ್ಯೂ ಜ್ವರವು ಮಕ್ಕಳಲ್ಲಿ ಹೆಚ್ಚಾಗಿ ಕಂಡುಬರುತ್ತಿದ್ದು, ನಿಂತ ನೀರಿನಲ್ಲಿ ಮಕ್ಕಳು ಆಟವಾಡಕೂಡದು ಎಂದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಶಾಲಾ ಮುಖ್ಯೋಪಾಧ್ಯಾಯೆ ವ್ಹಿ.ಎಸ್. ಬಸಾಪೂರ, ಇದು ಮಳೆಗಾಲವಾಗಿದ್ದರಿಂದ ಸಾಮಾನ್ಯವಾಗಿ ಸೊಳ್ಳೆಗಳು ಹೆಚ್ಚಾಗಿರುತ್ತವೆ. ವಿದ್ಯಾರ್ಥಿಗಳು ಸುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕೆಂದರು.

ಬಿ. ಯಶೋಧಾ ಸ್ವಾಗತಿಸಿದರು. ವ್ಹಿ.ಬಿ. ಕರಬಸಗೌಡ್ರ ನಿರೂಪಿಸಿದರು.

## ವಿವಿಧ ಚಟುವಟಿಕೆಗಳ ಉದ್ಘಾಟನೆ ಇಂದು

■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಬಾಲಲೀಲಾ ಮಾಹಾಂತ ಶಿವಯೋಗಿಗಳ ಕಲಾ ಭವನದಲ್ಲಿ ಎಸ್‌ಜೆಜೆಎಂ ಸಂಯುಕ್ತ ಪದವಿಪೂರ್ವ ಮಾಹಾವಿದ್ಯಾಲಯದ 2024/25ನೇ ಸಾಲಿನ ಪಠ್ಯೇತರ ಚಟುವಟಿಕೆಗಳು, ಎನ್.ಎಸ್.ಎಸ್., ವಿವಿಧ ಸಾಂಘಿಕ ಚಟುವಟಿಕೆಗಳು ಹಾಗೂ ಪ್ರೊಜೆಕ್ಟರ್ ಕೊಠಡಿಯ ಉದ್ಘಾಟನಾ ಸಮಾರಂಭ ಜುಲೈ 27ರ ಬೆಳಿಗ್ಗೆ 10 ಗಂಟೆಗೆ ಜರುಗಲಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಮುಳಗುಂದ ಗವಿಮಠದ ಡಾ.ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ವಹಿಸಿಕೊಳ್ಳುವರು. ಅಧ್ಯಕ್ಷತೆಯನ್ನು ಬಾಲಲೀಲಾ ಮಾಹಾಂತ ಶಿವಯೋಗಿ ಶಿಕ್ಷಣ ಸಮಿತಿಯ ಚೇರಮನ್ ಎಂ.ಡಿ. ಬಟ್ಟೂರ, ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ವಿಶ್ವವಿದ್ಯಾಲಯದ ಎನ್‌ಎಸ್‌ಎಸ್ ಕಾರ್ಯಕ್ರಮ ಸಂಯೋಜನಾಧಿಕಾರಿ ಪ್ರಶಾಂತ ಮೇಹರವಾಡೆ, ವಿ.ಎಸ್. ನೀಲಗುಂದ, ಡಾ. ಎಸ್.ಸಿ. ಚವಡಿ, ಪಿ.ಎ. ವಂಟಕರ, ಬಿ.ಸಿ. ಬಡ್ನಿ, ಎನ್.ಆರ್. ದೇಶಪಾಂಡೆ, ಎಂ.ಎಂ. ಅದರಗುಂಚಿ, ಕೆ.ಎಲ್. ಕರಿಗೌಡರ, ಎಸ್.ಸಿ. ಕುರ್ತಕೋಟಿ, ಎಫ್.ಎಸ್. ಅಮೋಘಿಮಠ, ಎಂ.ಎಂ. ಬಡ್ನಿ ಭಾಗವಹಿಸುವರು ಎಂದು ಪ್ರಾಚಾರ್ಯ ಎ.ಎಂ. ಅಂಗಡಿ ತಿಳಿಸಿದ್ದಾರೆ.



ಕರ್ನಾಟಕ ರಕ್ಷಣಾ ವೇದಿಕೆಯ ಗದಗ ಜಿಲ್ಲಾ ಕಾರ್ಮಿಕ ಘಟಕದ ಸದಸ್ಯರು ಕರವೇ ರಾಜಾಧ್ಯಕ್ಷ ಟಿ.ಎ. ನಾರಾಯಣಗೌಡ್ರ ಅವರನ್ನು ಬೆಂಗಳೂರಿನ ಕೇಂದ್ರ ಕಚೇರಿಯಲ್ಲಿ ಭೇಟಿ ಮಾಡಿ, ಗದಗ ಜಿಲ್ಲಾ ಕಾರ್ಮಿಕ ಘಟಕದ ಬಗ್ಗೆ ಚರ್ಚಿಸಿದರು. ಘಟಕದ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ತೌಸಿಫ ಢಾಲಾಯತರ ಸೇವೆಯನ್ನು ರಾಜ್ಯಾಧ್ಯಕ್ಷರು ಅಭಿನಂದಿಸಿದರು. ಈ ಸಂದರ್ಭದಲ್ಲಿ ಗದಗ ಘಟಕದ ನೂತನ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್.ಅಬ್ಬಿಗೇರಿ, ಮಾರುತಿ ಈಳಿಗೇರ, ಕೃಷ್ಣಾ ಲಮಾಣಿ, ಶರಣಪ್ಪ ಕರಮುಡಿ, ವಿರುಪಾಕ್ಷಪ್ಪ ಹಿತ್ತಲಮನಿ, ಲೋಕೇಶ ಸುತಾರ, ನಿಯಾಜ ಶೇಖ ಸೇರಿದಂತೆ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

## ಎಲ್ಲ ಸಮುದಾಯಕ್ಕೂ ನಿವೇಶನ ನೀಡಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆ ವ್ಯಾಪ್ತಿಯ ಖಾಲಿ ನಿವೇಶನಗಳನ್ನು ಪ್ರತಿಯೊಂದು ಸಮುದಾಯಕ್ಕೂ ನೀಡುವ ಮೂಲಕ ಆಯಾ ಸಮುದಾಯದ ಅಭಿವೃದ್ಧಿಗೆ ಸಹಕರಿಸುವಂತೆ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ ಶೆಟ್ಟಿ ಬಣದ ಅಧ್ಯಕ್ಷ ಮಹೇಶ ಕಲಘಟಗಿ ನೇತೃತ್ವದಲ್ಲಿ ಶುಕ್ರವಾರ ಪುರಸಭೆಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಹೇಶ ಕಲಘಟಗಿ ಮಾತನಾಡಿ, ಪಟ್ಟಣದ ಮಾರುಕಟ್ಟೆ ವ್ಯಾಪ್ತಿಯಲ್ಲಿ ಪ್ರತಿಯೊಂದು ಸಮುದಾಯದ ಅಭಿವೃದ್ಧಿಗಾಗಿ ಖಾಲಿ ನಿವೇಶನವನ್ನು ಒದಗಿಸಬೇಕು. ಪುರಸಭೆ ವ್ಯಾಪ್ತಿಯಲ್ಲಿ ಸುಮಾರು 40ಕ್ಕೂ ಹೆಚ್ಚು ಸಮುದಾಯಗಳಿವೆ. ಎಲ್ಲ ಸಮುದಾಯದ ಅಭಿವೃದ್ಧಿಯನ್ನು ಹಾಗೂ ಒಳಿತನ್ನು ಗಮನದಲ್ಲಿಟ್ಟುಕೊಂಡು ಒಂದೊಂದು ಖಾಲಿ ನಿವೇಶನಗಳನ್ನು ಒದಗಿಸಬೇಕು ಹಾಗೂ ನಿವೇಶನಗಳ ಕೊರತೆಯಾದರೆ ಪುರಸಭೆಯ ಮಳಿಗೆಗಳನ್ನು ಸಹ ಒದಗಿಸಿ ಅನೂಕೂಲ ಮಾಡಿಕೊಡಬೇಕೆಂದು ವಿನಂತಿಸಿದರು.




ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ ಮನವಿ ಸ್ವೀಕರಿಸಿದರು. ಈ ಸಂದರ್ಭದಲ್ಲಿ ವೇದಿಕೆಯ ಮಲ್ಲನಗೌಡ ಪಾಟೀಲ್, ಚಂದ್ರು ಪಾಣಿಗಟ್ಟಿ, ಈಶ್ವರಗೌಡ ಪಾಟೀಲ, ಶ್ರೇಯಾಂಕ ಹಿರೇಮಠ, ಪ್ರವೀಣ ದಶಮನಿ, ಅಮರೀಶ ಗಾಂಜಿ, ಮುರಳೀಧರ ಮಲ್ಲಸಮುದ್ರ, ಮಲ್ಲೇಶ ಡಂಬಳ, ಜಕಣಾಚಾರಿ, ಮೇದೂರ, ಶಶಿ ಗೋಸಾವಿ, ನಿಖಿಲ್ ಗೋಸಾವಿ, ಸಂಜೀವ ಗೋಸಾವಿ, ಆಕಾಶ ಗೋಸಾವಿ, ಕಿರಣ ಗೋಸಾವಿ, ತೇಜು ಉದ್ದನಗೌಡ್ರ, ಬಸನಗೌಡ ಮನ್ನಂಗಿ ಸೇರಿದಂತೆ ಅನೇಕರು ಹಾಜರಿದ್ದರು.

## ಬೀಚಿ ಬಳಗದಲ್ಲಿ ವೈದ್ಯರ ದಿನಾಚರಣೆ ಇಂದು

■ ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣದ ಬೀಚಿ ಬಳಗದ ಆಶ್ರಯದಲ್ಲಿ ವೈದ್ಯರ ದಿನಾಚರಣೆಯನ್ನು ಜುಲೈ 27ರ ಮಧ್ಯಾಹ್ನ 3.30ಕ್ಕೆ ಇಲ್ಲಿನ ಹಿರೇಮಠದಸಭಾ ಭವನದಲ್ಲಿ ಏರ್ಪಡಿಸಲಾಗಿದೆ.

ಪಟ್ಟಣದ ಹಿರಿಯ ವೈದ್ಯರಾದ ಡಾ. ಜಿ.ಕೆ. ಕಾಳೆ, ಡಾ. ಕೆ.ಬಿ. ಧನ್ನೂರ, ಡಾ. ಆರ್.ಕೆ. ಗಚ್ಚಿನಮಠ ಮತ್ತು ಡಾ. ಡೇನಿಯಲ್ ಫ್ರೆಡ್ರಿಕ್ಸ್ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದು, ಪಟ್ಟಣದ ಎಲ್ಲ ವೈದ್ಯರಿಗೆ ಈ ಸಂದರ್ಭದಲ್ಲಿ ಸನ್ಮಾನ ಜರುಗಲಿದೆ. ಅಧ್ಯಕ್ಷತೆಯನ್ನು ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ವಹಿಸುವರು ಎಂದು ಬಳಗದ ಸಂಚಾಲಕ ಈಶ್ವರ ಬೆಟಗೇರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಗದಗ ಜಿಲ್ಲಾ ಗೌರವ ಅಧ್ಯಕ್ಷರು ಹಾಗೂ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ತಾಲೂಕು ಅಧಿಕಾರಿಗಳಾಗಿರುವ ಡಾ. ಬಸವರಾಜ ಬಳ್ಳಾರಿ ಅವರ ಜನ್ಮದಿನದ ನಿಮಿತ್ತ ಅವರ ಶಿಷ್ಯ ಬಳಗ ಸನ್ಮಾನಿಸಿ, ಗೌರವಿಸಿ, ಶುಭವನ್ನು ಕೋರಿತು. ಈ ಸಂದರ್ಭದಲ್ಲಿ ಹನುಮಂತ ನಾಗರಹಳ್ಳಿ, ಕರೀಮಸಾಬ ಸುಣಗಾರ, ಪತ್ರಕರ್ತ ಸುನೀಲಸಿಂಗ್ ಲದ್ದಿಗೇರಿ, ಹನುಮಂತ ವಡ್ಡರ, ನಾಗರಾಜ ಜಂಗ್ಲಿ, ಶಂಕರ ವಡ್ಡರ, ಶರಣಪ್ಪ ವಡ್ಡರ, ಸುರೇಂದ್ರಸಿಂಗ್ ಕಾಟೇವಾಲ ಮುಂತಾದವರಿದ್ದರು.

### ಧರ್ಮೋತ್ತೇಜಕ ಸಂಗಮ ಸಮಾವೇಶದ ಉದ್ಘಾಟನಾ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಭಾರತೀಯ ಸಂಸ್ಕೃತಿ ನಾಶಗೊಳ್ಳಬಾರದು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಸಮಸ್ತ ಜನರ ಭೋಗ ಮೋಕ್ಷಗಳಿಗೆ ಧರ್ಮವೇ ಮೂಲ. ಧರ್ಮ ಮತ್ತು ದೇಶ ಮನುಷ್ಯನ ಎರಡು ಕಣ್ಣು. ವೈಚಾರಿಕತೆ ಮತ್ತು ಸುಧಾರಣೆಯ ಹೆಸರಿನಲ್ಲಿ ಆಧ್ಯಾತ್ಮ ಸಂಸ್ಕೃತಿ ನಾಶಗೊಳ್ಳಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ವಿಜಯನಗರದ ಶ್ರೀ ಬಸವೇಶ್ವರ ಸುಜ್ಞಾನ ಮಂಟಪದಲ್ಲಿ ಶ್ರೀಮದ್ವೀರಶೈವ ಸದ್ಬೋಧನಾ ಸಂಸ್ಥೆ ಬೆಂಗಳೂರು ಜಿಲ್ಲಾ ಘಟಕದ ಆಶ್ರಯದಲ್ಲಿ ಸಂಯೋಜಿಸಿದ್ದ ಧರ್ಮೋತ್ತೇಜಕ ಸಂಗಮ ಸಮಾವೇಶದ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಮಾನವನನ್ನು ಪರಿಪೂರ್ಣತೆಯೆಡೆಗೆ ಕರೆದೊಯ್ಯುವುದೇ ಗುರುವಿನ ಧರ್ಮವಾಗಿದೆ. ಸಾತ್ವಿಕ ಮತ್ತು ತಾತ್ವಿಕ ಚಿಂತನೆಗಳನ್ನು ಬೋಧಿಸುವುದರ ಮೂಲಕ ಸಾಮರಸ್ಯ ಸೌಹಾರ್ದತೆ ಬೆಳೆಸಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಗುರುವಿಲ್ಲದೇ ಅರಿವು ಆದರ್ಶಗಳು ತೋರವು. ವೀರಶೈವ ಧರ್ಮದಲ್ಲಿ ಗುರುವಿಗೆ ಪ್ರಥಮ ಸ್ಥಾನ ಕಲ್ಪಿಸಿದ್ದಾರೆ. ಶಿವ ಪಥವನರಿಯಲು ಗುರುವೇ ಕಾರಣೀಭೂತನಾಗಿದ್ದಾನೆ. ಧಾರ್ಮಿಕ ತತ್ವ ಸಿದ್ಧಾಂತಗಳ ಪರಿಪಾಲನೆಯಿಂದ ಜೀವನದಲ್ಲಿ ಶಾಂತಿ ನೆಮ್ಮದಿ ಪ್ರಾಪ್ತವಾಗುವುದೆಂದರು.



ಸಮಾರಂಭ ಉದ್ಘಾಟಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಮನುಷ್ಯನಲ್ಲಿ ಆಶೆಗಳು ಹೆಚ್ಚಾಗಿವೆ. ಆದರೆ ಆದರ್ಶ ಚಿಂತನೆಗಳ ಕೊರತೆಯಿದೆ. ಹೀಗಾಗಿ ಜೀವನದಲ್ಲಿ ಶಾಂತಿ ಸಮಾಧಾನವಿಲ್ಲ. ಆರೋಗ್ಯಪೂರ್ಣ ಸಮಾಜಕ್ಕೆ ಇಂಥ ಸಮಾರಂಭಗಳ ಅವಶ್ಯಕತೆ ಇದೆ ಎಂದರು.

ಡಾ. ಮಮತಾ ಸಾಲಿಮಠ ಅವರು ಸಿದ್ಧಾಂತ ಶಿಖಾಮಣಿಯಲ್ಲಿ ಗುರು ಹಿರಿಮೆ ವಿಷಯವಾಗಿ ಉಪನ್ಯಾಸ ನೀಡುತ್ತ ಮನುಷ್ಯ ಜೀವನದಲ್ಲಿ ಗುರಿ ಮತ್ತು ಗುರುವನ್ನು ಆಶ್ರಯಿಸಿ ಆದರ್ಶ ಬದುಕು ಕಟ್ಟಿಕೊಳ್ಳಬೇಕು. ಭಾರತೀಯ ಆಧ್ಯಾತ್ಮ ಸಂಪತ್ತು ಬೆಟ್ಟದಷ್ಟಿದೆ. ಪೂರ್ವದ ಋಷಿ ಮುನಿಗಳು ಆಚಾರ್ಯರು ಹಾಗೂ ಸಜ್ಜನರು ಕೊಟ್ಟು ಹೋದ ಸಂದೇಶ ನಮ್ಮೆಲ್ಲರ ಬಾಳಿಗೆ ಬೆಳಕು ತೋರುತ್ತವೆ. ಒತ್ತಡಗಳಿಂದ ಜರ್ಜರಿತವಾದ ಮನುಷ್ಯನ ಮನಸ್ಸಿಗೆ ಒಂದಿಷ್ಟಾದರೂ ಶಿವಜ್ಞಾನದ ಚಿಂತನೆ ಮತ್ತು ಪರಿಪಾಲನೆ ಅವಶ್ಯಕವೆಂದರು. ನಿವೃತ್ತ ಐಪಿಎಸ್ ಅಧಿಕಾರಿ ರೇವಣಸಿದ್ಧಯ್ಯ, ನ್ಯಾಯವಾದಿ ಚಂದ್ರಮೌಳಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದರು. ವೇದಿಕೆಯಲ್ಲಿ ಸಂಸ್ಥೆಯ ಅಧ್ಯಕ್ಷ ಬೀರೂರು ಶಿವಸ್ವಾಮಿ, ಮಾದೇವಯ್ಯ, ಉಮಾಶಂಕರ, ಚಂದ್ರಶೇಖರ ನಾಗರಾಳಮಠ, ಸಂಗಯ್ಯ ಹಿರೇಮಠರು ಉಪಸ್ಥಿತರಿದ್ದರು.

ನ್ಯಾಯವಾದಿ ಆರ್.ಆರ್. ಹಿರೇಮಠ ಸ್ವಾಗತಿಸಿದರು. ಲಾವಣ್ಯ ಮಂಜುನಾಥ ನಿರೂಪಿಸಿದರು. ಲತಾ ಜಿಗಳೂರು, ಪಂಚಾಕ್ಷರಿ ಹಿರೇಮಠ, ಪಿ.ಎಸ್. ವಿಶ್ವನಾಥ, ನ್ಯಾಯವಾದಿ ಬಿ.ಪಿ. ಪುಟ್ಟಸಿದ್ಧಯ್ಯ ಅನ್ನ ದಾಸೋಹ ಸೇವೆ ಸಲ್ಲಿಸಿದರು. ವೇ.ಶಿವಶಂಕರ ಶಾಸ್ತ್ರಿ ಮತ್ತು ಗಾನಸುಧೆ ತಂಡದವರು ಭಕ್ತಿಗೀತೆ ಪ್ರಸ್ತುತಪಡಿಸಿದರು.

ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ಮಾತನಾಡಿ ಬದುಕಿನಲ್ಲಿ ಶಾಂತಿ ನೆಮ್ಮದಿಗಿಂತ ಮಿಗಿಲಾದ ಸಂಪತ್ತಿಲ್ಲ. ಧರ್ಮದ ಪಾಲನೆಯಿಂದ ಇವು ದೊರಕುತ್ತವೆ ಹೊರತು ಹಣದಿಂದಲ್ಲ. ಶ್ರೀ ರಂಭಾಪುರಿ ಪೀಠದ ಆದರ್ಶ ಚಿಂತನೆಗಳು ಭಕ್ತ ಸಂಕುಲದ ಉನ್ನತಿಗೆ ಸ್ಫೂರ್ತಿಯಾಗಿವೆ ಎಂದರು. ಆಧ್ಯಾತ್ಮ ಚಿಂತಕ ವಿನಯ ಗುರೂಜಿ ಮಾತನಾಡಿ ಆಧ್ಯಾತ್ಮ ಲೋಕದ ಚಿತ್ಸೂರ್ಯ ಶ್ರೀ ಗುರು. ಧರ್ಮ ಸಂಸ್ಕೃತಿ ಜೀವನದ ಶ್ರೇಯಸ್ಸಿಗೆ ಮೂಲ. ಅಜ್ಞಾನ ಹೊರ ಸರಿಸಿ ಶಿವಜ್ಞಾನದ ಬೆಳಕು ಪಡೆಯಲು ಗುರುವನ್ನು ಆಶ್ರಯಿಸಬೇಕೆಂದರು.

# ಪಂಚಮಸಾಲಿ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕೆ.ಎಚ್. ಪಾಟೀಲ ಸಭಾಭವನದಲ್ಲಿ ಜುಲೈ 28ರಂದು ಪಂಚಮಸಾಲಿ ಸಮಾಜ ಸೇವಾ ಟ್ರಸ್ಟ್ ವತಿಯಿಂದ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ಪಂಚಮಸಾಲಿ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳ ಪ್ರತಿಭಾ ಪುರಸ್ಕಾರ ಜರುಗಲಿದೆ.

ಸಮಾರಂಭದ ಸಾನ್ನಿಧ್ಯವನ್ನು ಕೂಡಲಸಂಗಮ ಧರ್ಮಪೀಠದ ಶ್ರೀ ಬಸವಜಯ ಮೃತ್ಯುಂಜಯ ಮಹಾಸ್ವಾಮಿಗಳು ವಹಿಸುವರು. ಪ್ರತಿಭಾವಂತ ವಿದ್ಯಾರ್ಥಿಗಳು, ಸಮಾಜದ ಹಿರಿಯರು, ಮುಖಂಡರು, ಮಹಿಳೆಯರು, ಸೇರಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಶಿವು ಹಿರೇಮನಿಪಾಟೀಲ ಮನವಿ ಮಾಡಿಕೊಂಡಿದ್ದಾರೆ.

# ಸಿದ್ಧಾರ್ಥ ಬಡ್ನಿಗೆ ಬಂಗಾರದ ಪದಕ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ಸಾಯಿ ಶೂಟಿಂಗ್ ರೇಂಜ್‌ನಲ್ಲಿ ನಡೆದ ರಾಜ್ಯಮಟ್ಟದ 12ನೇ ಶೂಟಿಂಗ್ ಸ್ಪರ್ಧೆಯ 10 ಮೀಟರ್ ಏರ್ ಪಿಸ್ಟಲ್ ವಿಭಾಗದಲ್ಲಿ ಗದಗ ಸ್ಪೋರ್ಟ್ಸ್ ಶೂಟಿಂಗ್ ಅಕಾಡೆಮಿಯ ಶೂಟರ್ ಸಿದ್ಧಾರ್ಥ ಎಂ.ಬಡ್ನಿ ಸಬ್ ಯುಥ್ ವಿಭಾಗದಲ್ಲಿ ಬಂಗಾರದ ಪದಕ, ಯುಥ್ ವಿಭಾಗದಲ್ಲಿ ಬಂಗಾರದ ಪದಕ, ಜೂನಿಯರ್ ವಿಭಾಗದಲ್ಲಿ ಬಂಗಾರದ ಪದಕ ಹಾಗೂ ಸೀನಿಯರ್ ವಿಭಾಗದಲ್ಲಿ ಬೆಳ್ಳಿಯ ಪದಕವನ್ನು ತಮ್ಮದಾಗಿಸಿಕೊಂಡಿದ್ದಾರೆ.

ಸಿದ್ಧಾರ್ಥನ ಅತ್ಯುತ್ತಮ ಸಾಧನೆಗೆ ಅಧ್ಯಕ್ಷರಾದ ಮುರಘರಾಜೇಂದ್ರ ಬಡ್ನಿ, ವಿಜಯಕುಮಾರ ಗಡ್ಡಿ, ತರಬೇತುದಾರರಾದ ಬಸವರಾಜ ಹೊಂಬಾಳಿ, ಗಣೇಶ ಕಬಾಡಿ, ಸತೀಶ ಚಿಕ್ಕನಗೌಡರ, ವರಲಕ್ಷ್ಮೀ ಹೊಂಬಾಳಿ, ಅಕಾಡೆಮಿಯ ಪಾಲಕರು ಹಾಗೂ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.

# ಶ್ರೀ ಮೃತ್ಯುಂಜಯ ಅಪ್ಪನವರ ಸ್ಮರಣೋತ್ಸವ ಮಾಲಿಕೆ




■ವಿಜಯಸಾಕ್ಷಿ ಸುದ್ದಿ, ಗದಗ

ಮಣಕವಾಡದ ಮಹಿಮಾಪುರುಷ ಶ್ರೀ ಗುರುಮೃತ್ಯುಂಜಯ ಮಹಾಸ್ವಾಮಿಗಳ ಸ್ಮರಣೋತ್ಸವ ಮಾಲಿಕೆಯ 130ನೇ ಕಾರ್ಯಕ್ರಮ ಜುಲೈ 28ರ ಮುಂಜಾನೆ 11 ಗಂಟೆಗೆ ನಗರದ ಲಖಾನಿ ಆಸ್ಪತ್ರೆ ಎದುರಿಗಿನ ಶ್ರೀ ಮೃತ್ಯುಂಜಯ ಗುರುಕುಲ ಆಶ್ರಮದ ಸಭಾಭವನದಲ್ಲಿ ಜರುಗಲಿದೆ.

ಹಿರಿಯ ಸಾಹಿತಿ ಐ.ಕೆ. ಕಮ್ಮಾರ ಸಮಾರಂಭದ ಅಧ್ಯಕ್ಷತೆ ವಹಿಸುವರು. ಎನ್.ಸಿ.ಸಿ. ಇಲಾಖೆಯ ಯುವ ಸಾಹಿತಿ, ದೀನಬಂಧು ಎಸ್.ಆದಿಯವರು ಮುಖ್ಯ ಅತಿಥಿಗಳಾಗಿ ಆಗಮಿಸುವರು. ನಿವೃತ್ತ ಗುರುಮಾತೆ ರತ್ನಾ ಘಾರ್ಗಿ ಭಕ್ತಿ ಸೇವೆ ವಹಿಸಿಕೊಳ್ಳುವರು.

ನಾಗಾವಿಯ ಮೃತ್ಯುಂಜಯ ಹಟ್ಟಿ, ಹಿರೇಹಂದಿಗೋಳದ ಶಿವಶಂಕ್ರಪ್ಪ ಆರಟ್ಟಿ, ಶಿವಣ್ಣ ಒಡೆಯರ, ಎಚ್.ಎನ್. ಕುರಿ, ಸಂಭಾಪೂರದ ರಾಯಪ್ಪಜ್ಜ ನಾಗನೂರ, ರಾಜೇಂದ್ರಸಾ ಕಲಬುರ್ಗಿ, ಡಿ.ಜೆ. ಪಾಟೀಲ, ಅನರ್ಘ್ಯ ಸಂಗೀತ ಪಾಠಶಾಲೆಯ ಸಂಚಾಲಕರಾದ ವನಮಾಲ ಮಾನಶೆಟ್ಟಿ, ಕಾಶೀಮಸಾಬ ಹವಾಲ್ದಾರ ಇವರಿಂದ ಸಂಗೀತ ಕಾರ್ಯಕ್ರಮ ಜರುಗಲಿದೆ. ಮಧ್ಯಾಹ್ನ 1 ಗಂಟೆಗೆ ಶ್ರೀ ಗುರುಮೃತ್ಯುಂಜಯ ಸೇವಾ ಸಮಿತಿ ಸೌಹಾರ್ದಮಹಾಮನೆ ವೇದಿಕೆಯ ಕಾರ್ಯಕಾರಿಣಿ ಸಭೆ ಜರುಗಲಿದೆ.

ಈ ಪುಣ್ಯ ಕಾರ್ಯದಲ್ಲಿ ಪಾಲ್ಗೊಂಡು ಶ್ರೀ ಗುರು ಮೃತ್ಯುಂಜಯ ಅಪ್ಪನ ಕೃಪೆಗೆ ಪಾತ್ರರಾಗಲು ಆಶ್ರಮದ ವಿದ್ಯಾರ್ಥಿಗಳಾದ ಆಲಮ್, ಅಸ್ಲಮ್, ಅಕ್ರಮ, ಸ್ನೇಹಾ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಡಾ. ಬಸವರಾಜ ಬಳ್ಳಾರಿಯವರಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಬೆಟಗೇರಿಯ ನರಸಾಪೂರ ರಸ್ತೆಯಲ್ಲಿರುವ ಶ್ರೀ ಅಮರೇಶ್ವರ ದೇವಸ್ಥಾನದ ಹತ್ತಿರದ ದಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯದಲ್ಲಿ ಇತ್ತೀಚೆಗೆ ಜರುಗಿದ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭದಲ್ಲಿ ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ತಾಲೂಕು ಅಧಿಕಾರಿ ಡಾ. ಬಸವರಾಜ ಬಳ್ಳಾರಿ ಅವರನ್ನು ಸನ್ಮಾನಿಸಿ, ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಓಬಿಸಿ ಜಿಲ್ಲಾ ಅಧಿಕಾರಿ ರವಿ ಗುಂಜೀಕರ, ಪ್ರಾಚಾರ್ಯರಾದ ಎಮ್.ಜಿ. ಗವಾನಿ, ಪಿ.ಜಿ. ಪಾಟೀಲ್, ಜೈ ಹನುಮಾನ ಎಚ್.ಕೆ, ಡಾ. ಬಿ.ಬಿ. ಹೊಳಗುಂದಿ, ಡಾ. ವಿ.ಎ. ಹಿತ್ತಲಮನಿ, ಮಲ್ಲಿಕಾರ್ಜುನಗೌಡ ಪಾಟೀಲ್, ಅಶೋಕ ತುರಮುಂದಿ, ವಸತಿ ನಿಲಯದ ಮೇಲ್ವಿಚಾರಕಿ ಶೋಭಾ ಆಲೂರು, ಪತ್ರಕರ್ತ ಸುನೀಲಸಿಂಗ್ ಲದ್ದಿಗೇರಿ ಉಪಸ್ಥಿತರಿದ್ದರು.

### ನರೇಗಾ ಯೋಜನೆ ನೆರವು | ಬರಡು ಭೂಮಿಯಲ್ಲಿ ಡ್ರ್ಯಾಗನ್ ಫ್ರೂಟ್ ಬೆಳೆದ ವೈ.ಡಿ. ಪಾಟೀಲ

# ಕೃಷಿಯಲ್ಲಿ ಖುಷಿ ಕಂಡ ವೈದ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಒಣಭೂಮಿಯೇ ಅಧಿಕವಾಗಿರುವ ಗದಗ ಜಿಲ್ಲೆಯಲ್ಲಿ ಪಾಪಸ್ ಕಳ್ಳಿಯ ಜಾತಿಗೆ ಸೇರಿದ ಅಧಿಕ ಪೋಷಕಾಂಶ ಹೊಂದಿರುವ ಡ್ರ್ಯಾಗನ್ ಫ್ರೂಟ್ ಬೆಳೆಯಲು ರೈತರು ಮುಂದಾಗಿದ್ದಾರೆ. ಲಕ್ಷ್ಮೇಶ್ವರ ತಾಲೂಕಿನ ಗೊಜನೂರ ಗ್ರಾಮದಲ್ಲಿ ವೈ.ಡಿ. ಪಾಟೀಲ ಅವರು ಬಿಇಎಂಎಸ್ ಕಲಿತು ವೈದ್ಯರಾಗಿದ್ದಾರೆ. ತಮ್ಮದೇ ಕ್ಲಿನಿಕ್ ತೆರೆದು ವೈದ್ಯಕೀಯ ಸೇವೆ ನೀಡುತ್ತಿದ್ದಾರೆ. ಸ್ವತಃ ದುಡಿಮೆಯಲ್ಲಿಯೂ ಉನ್ನತ ಸಾಧನೆ ಮಾಡಬೇಕೆಂಬ ಹಂಬಲದಿಂದ ಗೊಜನೂರ ಗ್ರಾಮದಲ್ಲಿ ಯಾರೂ ಖರೀದಿಸಲು ಆಸಕ್ತಿ ತೋರದ ಐದುವರೆ ಎಕರೆ ಬರಡು ಭೂಮಿಯನ್ನು ಖರೀದಿ ಮಾಡಿ ಕೃಷಿಯಲ್ಲಿ ತೊಡಗಿದ್ದಾರೆ.





ಕಡಿಮೆ ನೀರು ಇರುವ ಒಣಭೂಮಿ ಪ್ರದೇಶದಲ್ಲಿ ಬೆಳೆಯಲು ಸೂಕ್ತವಾಗಿರುವ ಡ್ರ್ಯಾಗನ್ ಫ್ರೂಟ್ ಬೆಳೆಯಬೇಕೆಂಬ ಇಚ್ಛೆಯಿಂದ ವೈ.ಡಿ. ಪಾಟೀಲರು 2022ರಲ್ಲಿ ಉದ್ಯೋಗ ಖಾತ್ರಿ ಯೋಜನೆಯ 1,30,000 ರೂ. ಅನುದಾನದಲ್ಲಿ ತಮ್ಮ ಒಂದು ಎಕರೆ ಭೂಮಿಯಲ್ಲಿ ಇಸ್ರೇಲ್ ಮಾದರಿ ಕೃಷಿ ಪದ್ಧತಿ ಅಳವಡಿಸಿಕೊಂಡು ಡ್ರ್ಯಾಗನ್ ಫ್ರೂಟ್ ಸಸಿಗಳನ್ನು ನಾಟಿ ಮಾಡಿದ್ದಾರೆ.

ಈ ಬೆಳೆ ಬೆಳೆಯಲು ಮೊದಲು ಕಲ್ಲಿನ ಕಂಬದ ಬದಿ ಸಸಿ ನಾಟಿ ಮಾಡಲಾಗುತ್ತದೆ. 1 ಕಂಬದಿಂದ 4 ಅಡಿ ಅಂತರದಲ್ಲಿ ಮತ್ತೊಂದು ಕಂಬ ಮತ್ತು 8 ಅಡಿ ಅಂತರದ ಸಾಲು, ಎಕರೆಗೆ 300 ಕಂಬಗಳು ಬರುತ್ತವೆ. ಒಂದು ಕಂಬಕ್ಕೆ 4 ಹಣ್ಣಿನ ಸಸಿಗಳಂತೆ ಒಟ್ಟು 3200 ಸಸಿ ನಾಟಿ ಮಾಡಲಾಗಿದೆ. ಇವುಗಳಿಗೆ ಹನಿ ನೀರಾವರಿ ಮೂಲಕ ನೀರುಣಿಸಲಾಗುತ್ತದೆ. ನಾಟಿ ಮಾಡಿದ ವರ್ಷದ ನಂತರ ಇಳುವರಿ ಆರಂಭವಾಗುತ್ತದೆ. ಪ್ರತಿ ನಾಲ್ಕು ತಿಂಗಳಿಗೊಮ್ಮೆ ಕಟಾವು ಮಾಡಬಹುದು. ಸಾವಯವ ಪದ್ಧತಿಯಲ್ಲಿ ಕೋಳಿ, ಸಗಣಿ ಗೊಬ್ಬರ ಹಾಕಿ ಬೆಳೆಯುತ್ತಿದ್ದಾರೆ.

ನಗರದ ಮಾರುಕಟ್ಟೆಯಲ್ಲಿ ಈ ಹಣ್ಣಿಗೆ ಉತ್ತಮ ಬೆಲೆ ಹಾಗೂ ಬೇಡಿಕೆಯೂ ಇದೆ. ಪಾಟೀಲರು ಗದಗ, ಲಕ್ಷ್ಮೇಶ್ವರದ ತಮ್ಮ ಪರಿಚಿತ ಹಣ್ಣು ಮಾರಾಟಗಾರರಿಗೆ 80 ರೂ.ಗೆ ಕೆಜಿಯಂತೆ ಮಾರಾಟ ಮಾಡಿ ಕಳೆದ ವರ್ಷ 1 ಲಕ್ಷ ರೂ. ಆದಾಯ ಪಡೆದಿದ್ದಾರೆ. ಸದ್ಯ 120 ರೂ./ಕೆ.ಜಿಯಂತೆ ಮಾರಾಟ ಮಾಡುತ್ತಿದ್ದು ಉತ್ತಮ ಆದಾಯದ ನಿರೀಕ್ಷೆಯಲ್ಲಿದ್ದಾರೆ.

ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆ ಸರಕಾರದ ಮಹತ್ವಾಕಾಂಕ್ಷೆಯ ಯೋಜನೆಗಳಲ್ಲಿ ಪ್ರಮುಖವಾದುದಾಗಿದೆ. ಯೋಜನೆಯಲ್ಲಿ ಸಮುದಾಯ ಹಾಗೂ ವೈಯಕ್ತಿಕ ಕಾಮಗಾರಿ ಎಂದು ಭಾಗಗಳಿವೆ. ತೋಟಗಾರಿಕೆ ಬೆಳೆ, ಅರಣ್ಯ ಬೆಳೆಗಳನ್ನು ಬೆಳೆದುಕೊಳ್ಳಲು ಅವಕಾಶವಿದೆ. ರೈತರು ಸ್ವ ಇಚ್ಛೆ ಹಾಗೂ ಆಸಕ್ತಿಯಿಂದ ಯೋಜನೆಯಡಿ ದೊರೆಯುವ ಅನುದಾನ ಬಳಕೆ ಮಾಡಿಕೊಂಡು ಗೊಜನೂರ ಗ್ರಾಮದಲ್ಲಿ ವೈ.ಡಿ. ಪಾಟೀಲರಂತೆ ಆರ್ಥಿಕವಾಗಿ ಸಬಲರಾಗಬೇಕು ಎಂಬುದು ಯೋಜನೆಯ ಉದ್ದೇಶವಾಗಿದೆ.

**– ಕೃಷ್ಣಪ್ಪ ಧರ್ಮರ.**
ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ.

ಗದಗ ಜಿಲ್ಲಾ ಪಂಚಾಯತಿಯು ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಡ್ರ್ಯಾಗನ್ ಫ್ರೂಟ್ ಬೆಳೆಯಲು ಆಸಕ್ತ ರೈತರಿಂದ ಅರ್ಜಿ ಆಹ್ವಾನಿಸಲಾಗಿತ್ತು. ಅದರಂತೆ 1,30,000 ರೂ. ಅನುದಾನದಲ್ಲಿ ಒಂದು ಎಕರೆಯಲ್ಲಿ ಡ್ರ್ಯಾಗನ್ ಫ್ರೂಟ್ ಬೆಳೆದಿದ್ದೇನೆ. ಸರಕಾರದ ಯೋಜನೆಯನ್ನು ಸದ್ಬಳಕೆ ಮಾಡಿಕೊಂಡು ಕೃಷಿ ಕ್ಷೇತ್ರದಲ್ಲಿಯೇ ಲಾಭ ಪಡೆದು ನೆಮ್ಮದಿಯ ಜೀವನ ಕಟ್ಟಿಕೊಳ್ಳಬಹುದಾಗಿದೆ.

**– ವೈ.ಡಿ. ಪಾಟೀಲ.**
ಡ್ರ್ಯಾಗನ್ ಫ್ರೂಟ್ ಬೆಳೆಗಾರರು.

### ರಾಜ್ಯ ಮಟ್ಟದ 'ಬಾಲ ಸಾಹಿತ್ಯ ಚಿಗುರು' ಪ್ರಶಸ್ತಿ

# ಪ್ರಣತಿಯ ಕೃತಿ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಸಿಂದಗಿಯ ವಿದ್ಯಾ ಚೇತನ ಪ್ರಕಾಶನವು ರಾಜ್ಯ ಮಟ್ಟದಲ್ಲಿ ಪ್ರತಿವರ್ಷ ಅತ್ಯುತ್ತಮ ಮಕ್ಕಳ ಸಾಹಿತ್ಯ ಕೃತಿಗೆ ನೀಡುವ ಈ ಸಲದ ರಾಜ್ಯ ಮಟ್ಟದ 'ಬಾಲ ಸಾಹಿತ್ಯ ಚಿಗುರು' ಪ್ರಶಸ್ತಿಗೆ ಗದುಗಿನ ಕೆ.ಎಲ್.ಇ ಶಾಲೆಯ 9ನೇ ತರಗತಿಯ ವಿದ್ಯಾರ್ಥಿನಿ, ಬಾಲಕವಯಿತ್ರಿ ಕು. ಪ್ರಣತಿ ಆರ್.ಗಡಾದ ಬರೆದಿರುವ 'ನಾನು ಮಳೆಯಾದರೆ' ಎಂಬ ಮಕ್ಕಳ ಗೀತೆಗಳ ಸಂಕಲನ ಆಯ್ಕೆಯಾಗಿದೆ ಎಂದು ವಿದ್ಯಾ ಚೇತನದ ಸಂಚಾಲಕರು ಹಾಗೂ ಖ್ಯಾತ ಮಕ್ಕಳ ಸಾಹಿತಿಗಳು ಆದ ಹ.ಮ ಪೂಜಾರ ತಿಳಿಸಿದ್ದಾರೆ.

ಜುಲೈ 28ರಂದು ಸಿಂದಗಿಯ ಸಾರಂಗಮಠದಲ್ಲಿ ಪರಮಪೂಜ್ಯ ಡಾ. ಪ್ರಭು ಸಾರಂಗ ದೇವ ಶಿವಾಚಾರ್ಯರ ಸಾನ್ನಿಧ್ಯದಲ್ಲಿ ಜರುಗುವ ಪ್ರಶಸ್ತಿ ಪ್ರದಾನ ಹಾಗೂ ಸನ್ಮಾನ ಸಮಾರಂಭದಲ್ಲಿ ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ ಅವರು ಕು. ಪ್ರಣತಿ ಆರ್.ಗಡಾದರಿಗೆ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.





ಸಮಾರಂಭದ ಅಧ್ಯಕ್ಷತೆಯನ್ನು ನಿವೃತ್ತ ಪ್ರಾಚಾರ್ಯ ಪ್ರೊ. ಶಾಂತು ಹಿರೇಮಠ ವಹಿಸಲಿದ್ದು, ಕಾರ್ಯಕ್ರಮವನ್ನು ಸಿಂದಗಿ ಶಾಸಕ ಅಶೋಕ್ ಮನಗೂಳಿ ಉದ್ಘಾಟಿಸಲಿದ್ದಾರೆ. ಪ್ರಶಸ್ತಿಯು ನಗದು ಮತ್ತು ಪ್ರಶಸ್ತಿ ಫಲಕ ಒಳಗೊಂಡಿದೆ.

ತನ್ನ ಕವಿತೆ ವಚನ ಹಾಗೂ ಲೇಖನಗಳ ಮೂಲಕ ಮಕ್ಕಳ ಸಾಹಿತ್ಯದಲ್ಲಿ ಗಮನಸೆಳೆದ ಪ್ರಣತಿ ಗಡಾದ ಈಗಾಗಲೇ ದೆಹಲಿ ಮೈಸೂರು, ಬೆಂಗಳೂರು, ಹಾಸನ, ಕೊಪ್ಪಳ ಮುಂತಾದ ಸ್ಥಳಗಳಲ್ಲಿ ನಡೆದ ರಾಷ್ಟ್ರ ಹಾಗೂ ರಾಜ್ಯಮಟ್ಟದ ಮಕ್ಕಳ ಸಾಹಿತ್ಯದ ಕಾರ್ಯಕ್ರಮದಲ್ಲಿ ಕವಿತೆ ವಚನ ಪ್ರಬಂಧ ಮಂಡಿಸಿದ್ದಾಳೆ. ಇವಳಿಗೆ ಕಳೆದ ವರ್ಷ ಕರ್ನಾಟಕ ಸರ್ಕಾರದ ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಸಾಧಾರಣ ಪ್ರತಿಭಾ ಪುರಸ್ಕಾರ ಸಂದಿದೆ.

ಬಾಲ ಸಾಹಿತ್ಯ ಪ್ರತಿಭಾ ಪುರಸ್ಕಾರಕ್ಕೆ ಆಯ್ಕೆಯಾದ ಪ್ರಣತಿ ಗಡಾದರನ್ನು ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ತು, ಜಿಲ್ಲಾ ಸಿರಿಗನ್ನಡ ವೇದಿಕೆ, ಜಿಲ್ಲಾ ವಚನ ಸಾಹಿತ್ಯ ಹಾಗೂ ಸಾಂಸ್ಕೃತಿಕ ಪರಿಷತ್ತು, ಜಿಲ್ಲಾ ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತು ಮುಂತಾದ ಸಂಘಟನೆಗಳು ಅಭಿನಂದಿಸಿವೆ.

# ಯಕ್ಷ ಸಂಭ್ರಮ, ಪ್ರಶಸ್ತಿ ಪ್ರದಾನ ನಾಳೆ


■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ತಮ್ಮ ಮನ್ ಕೀ ಬಾತ್‌ನಲ್ಲಿ ಶ್ಲಾಘಿಸಿರುವ ನಗರದ ಕಲಾಚೇತನ ಸಾಂಸ್ಕೃತಿಕ ಆಕಾಡೆಮಿ ವತಿಯಿಂದ ಜುಲೈ 28ರ ಸಂಜೆ 6 ಗಂಟೆಗೆ ನಗರದ ತೋಂಟದಾರ್ಯ ಕಲ್ಯಾಣಕೇಂದ್ರದಲ್ಲಿ 'ಯಕ್ಷ ಸಂಭ್ರಮ' ಕಾರ್ಯಕ್ರಮ ಜರುಗಲಿದೆ. ಕಾರ್ಯಕ್ರಮವನ್ನು ಪ್ರಸಿದ್ಧ ತಾಳ ಮದ್ದಲೆ ಕಲಾವಿದರಾದ ಮೋಹನ ಭಾಸ್ಕರ ಹೆಗಡೆ ಉದ್ಘಾಟಿಸಿ ಪ್ರಶಸ್ತಿ ಪ್ರದಾನ ನೆರವೇರಿಸುವರು.

ಬೆಂಗಳೂರಿನ ಚಲನಚಿತ್ರ ರಂಗಭೂಮಿ ಕಲಾವಿದರಾದ ರಾಮಕೃಷ್ಣ ನೀರ್ನಳ್ಳಿ, ವೈದ್ಯರು ಹಾಗೂ ಕ್ರೀಡಾಪಟುಗಳಾದ ಡಾ. ಜಿ.ಬಿ ಬಿಡಿನಹಾಳ, ಕುಂದಾಪುರದ ಯಕ್ಷಗಾನ ಕಲಾವಿದರಾದ ರಾಘವೇಂದ್ರ ಮಯ್ಯ ಅವರಿಗೆ ಕಲಾಚೇತನ ಪ್ರಶಸ್ತಿ ನೀಡಿ ಗೌರವಿಸಲಾಗುವುದು. ಮುಖ್ಯ ಅತಿಥಿಗಳಾಗಿ ತೋಂಟದಾರ್ಯ ಸಂಸ್ಥಾನಮಠದ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟಿ, ನಗರಸಭೆ ನಿಕಟಪೂರ್ವ ಅಧ್ಯಕ್ಷರಾದ ಉಷಾ ದಾಸರ ಆಗಮಿಸುವರು.

ಕುಂದಾಪುರದ ಹಾಲಾಡಿಯ ಮಹಾಗಣಪತಿ ಪ್ರವಾಸಿ ಯಕ್ಷಗಾನ ಮಂಡಳಿಯಿಂದ ಯಕ್ಷ ಸಂಭ್ರಮ ಯಕ್ಷಗಾನ ಜರುಗುವುದು. ಈ ಕಾರ್ಯಕ್ರಮಕ್ಕೆ ಕಲಾಸಕ್ತರು ಆಗಮಿಸಲು ಕಲಾಚೇತನ ಸಾಂಸ್ಕೃತಿಕ ಆಕಾಡೆಮಿ ಅಧ್ಯಕ್ಷ ಡಾ. ಕಾವೆಂಶ್ರೀ ವಿನಂತಿಸಿದ್ದಾರೆ.

# ಕಾರ್ಗಿಲ್ ವಿಜಯೋತ್ಸವ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಕಾರ್ಗಿಲ್ ವಿಜಯೋತ್ಸವದ ಅಂಗವಾಗಿ ಗದಗ ಜಿಲ್ಲಾ ಮಾಜಿ ಸೈನಿಕರ ಸಂಘ, ಮಾಜಿ ಹಾಗೂ ಹಾಲಿ ಪ್ಯಾರಾಮಿಲಿಟರಿ ಯೋಧರ ಕಲ್ಯಾಣ ಸಂಘ ಇವರ ಸಹಯೋಗದೊಂದಿಗೆ 25ನೇ ಕಾರ್ಗಿಲ್ ವಿಜಯೋತ್ಸವದ ರಜತಮಹೋತ್ಸವ ಹಾಗೂ 1962, 1965, 1971 ಮತ್ತು 1999ರ ಯುದ್ಧದಲ್ಲಿ ಹುತಾತ್ಮ ವೀರಯೋಧರಿಗೆ ಗೌರವ ನಮನ ಕಾರ್ಯಕ್ರಮ ಜರುಗಿತು.

ಈ ರ‍್ಯಾಲಿಯಲ್ಲಿ ಅಲ್ ಇಂಡಿಯಾ ಬಂಜಾರ ಸೇವಾ ಸಂಘದ ತಾಲೂಕಾ ಸಂಘಟನಾ ಕಾರ್ಯದರ್ಶಿ ಶಿವಾಜಿ ಚವ್ಹಾಣ ಸೇರಿದಂತೆ ನಗರದ ಶಾಲಾ-ಕಾಲೇಜು ವಿದ್ಯಾರ್ಥಿಗಳು, ದೇಶಪ್ರೇಮಿಗಳು, ಸಮಾಜಸೇವಕರು, ಎನ್.ಸಿ.ಸಿ. ವಿದ್ಯಾರ್ಥಿಗಳು, ಮಹಿಳೆಯರು ಪಾಲ್ಗೊಂಡಿದ್ದರು. ಈ ರ‍್ಯಾಲಿಯನ್ನು ನಗರದ ಕಿತ್ತೂರು ಚನ್ನಮ್ಮ ಸರ್ಕಲ್‌ನಲ್ಲಿ ಪ್ರಾರಂಭವಾಗಿ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಹುತಾತ್ಮ ಯೋಧರಿಗೆ ಗೌರವ ನಮನ ಸಲ್ಲಿಸಲಾಯಿತು.

### ಕಾರ್ಗಿಲ್ ವಿಜಯೋತ್ಸವದ ನಿಮಿತ್ತ ಬಿಜೆಪಿಯಿಂದ ಪಂಜಿನ ಮೆರವಣಿಗೆ

# ವೀರ ಯೋಧರನ್ನು ಸ್ಮರಿಸೋಣ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕಾರ್ಗಿಲ್ ಯುದ್ಧದಲ್ಲಿ ಭಾರತೀಯ ಸೈನಿಕರು ಕೆಚ್ಚೆದೆ 'ಯಿಂದ ಹೋರಾಡಿ ದೇಶದ ಘನತೆ, ಸಾಹಸವನ್ನು ಎತ್ತಿ ಹಿಡಿದಿದ್ದರು. ಇವರ ತ್ಯಾಗ, ಬಲಿದಾನ, ದೇಶಪ್ರೇಮ ಎಲ್ಲಾ ಭಾರತೀಯರಿಗೂ ದಾರಿದೀಪ. ಸೈನಿಕರನ್ನು ದೇಶದ ಪ್ರತಿಯೊಬ್ಬರೂ ಸ್ಮರಿಸಿಕೊಳ್ಳಬೇಕು ಎಂದು ಬಿಜೆಪಿ ಶಿರಹಟ್ಟಿ ಮಂಡಳದ ಪ್ರಧಾನ ಕಾರ್ಯದರ್ಶಿ ಅನಿಲ ಮುಳಗುಂದ, ಮಾಜಿ ಪ್ರ.ಕಾರ್ಯದರ್ಶಿ ಗಂಗಾಧರ ಮೆಣಸಿನಕಾಯಿ ಹೇಳಿದರು.

ಅವರು ಬಿಜೆಪಿ ಶಿರಹಟ್ಟಿ ಮಂಡಳ ಯುವ ಮೋರ್ಚಾ ಹಾಗೂ ನಗರ ಘಟಕದಿಂದ ಕಾರ್ಗಿಲ್ ವಿಜಯೋತ್ಸವದ ನಿಮಿತ್ತ ಪಟ್ಟಣದಲ್ಲಿ ಗುರುವಾರ ಸಂಜೆ ಪಂಜಿನ ಮೆರವಣಿಗೆಯ ಬಳಿಕ ವೀರ ಯೋಧರನ್ನು ಸ್ಮರಿಸಿ ಮಾತನಾಡಿದರು. 2 ತಿಂಗಳು ನಡೆದ ಯುದ್ಧದಲ್ಲಿ 490 ಭಾರತೀಯ ಯೋಧರು ವೀರ ಮರಣ ಹೊಂದಿದರು. 1999ರ ಜುಲೈ 26ರಂದು 'ಟೈಗರ್ ಹಿಲ್' ಅನ್ನು ವಶಪಡಿಸಿಕೊಳ್ಳುವುದರೊಂದಿಗೆ ಭಾರತ ವಿಜಯ ಗಳಿಸಿತು. ಈ ಯುದ್ಧದಲ್ಲಿ ಭಾರತ ತನ್ನ ಸಾರ್ವಭೌಮತೆ ಮತ್ತು ಸಮಗ್ರತೆಯನ್ನು ರಕ್ಷಿಸಲು ಬಲಿಷ್ಠವಾಗಿದೆ ಎಂಬ ದೇಶ ಪ್ರೇಮವನ್ನು ಜಗತ್ತಿಗೆ ತೋರಿಸಿತ್ತು. ತಾಯಿ ನೆಲ ಸಂಕಷ್ಟದಲ್ಲಿದ್ದಾಗ ಸಾವಿಗೂ ಅಂಜದೆ ಹೋರಾಡಿದ ಯೋಧರನ್ನು ಸ್ಮರಿಸೋಣ. ದೇಶಕ್ಕಾಗಿ ಪ್ರಾಣಾರ್ಪಣೆಗೈದ ಕೆಚ್ಚೆದೆಯ ವೀರರ ತ್ಯಾಗ ಎಂದಿಗೂ ಅಮರ ಎಂದರು.

ಮೆರವಣಿಗೆಯು ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದಿಂದ ಮುಖ್ಯ ಬಜಾರ ಮುಖಾಂತರ ಸಾಗಿ ಸರಕಾರಿ ಆಸ್ಪತ್ರೆ ಸರ್ಕಲ್‌ನಲ್ಲಿ ಸಂಪನ್ನಗೊಂಡಿತು. ಈ ವೇಳೆ ಬಿಜೆಪಿ ಯುವ ಮೋರ್ಚಾ ನಗರಾಧ್ಯಕ್ಷ ಈರಣ್ಣ ಪೂಜಾರ, ಬಸವರಾಜ ಮೆಣಸಿನಕಾಯಿ, ಜೆಡಿಎಸ್ ತಾಲೂಕಾಧ್ಯಕ್ಷ ಪ್ರವೀಣ ಬಾಳಿಕಾಯಿ, ಬಸವರಾಜ ಕಲ್ಲೂರ, ಗಂಗಾಧರ ಮೆಣಸಿನಕಾಯಿ, ಮಂಜುನಾಥ ಗಜಾಕೋಶ, ದುಂಡೇಶ ಕೊಟಗಿ, ರಾಜಶೇಖರ ಶಿಗ್ಲಿಮಠ, ಮಹಾಂತೇಶ ಮಣಕವಾಡ, ಸಂತೋಷ ಜಾವೂರ, ಆಕಾಶ ಸೌದತ್ತಿ, ನವೀನ ಕುಂಬಾರ, ಮಂಜಯ್ಯ ಕಲಕೇರಿಮಠ, ಮಂಜುನಾಥ ಗೊರವರ, ಹನುಮಂತ ರಾಮಗೇರಿ, ಕಿರಣ ಚಿಲ್ಲೂರಮಠ, ಆದೇಶ ಸವಣೂರ, ಮಲ್ಲಿಕಾರ್ಜುನ ಹಾಳದೋಟದ ಮುಂತಾದವರಿದ್ದರು.

# ವಿದ್ಯಾರ್ಥಿಗಳಲ್ಲಿ ಸ್ಪರ್ಧಾ ಭಾವನೆಯಿರಲಿ

■ವಿಜಯಸಾಕ್ಷಿ ಸುದ್ದಿ, ರೋಣ

ಕ್ರೀಡೆಗಳಲ್ಲಿ ಉಜ್ವಲ ಭವಿಷ್ಯ ಕಾಣಲು ವಿದ್ಯಾರ್ಥಿಗಳಲ್ಲಿ ಸ್ಪರ್ಧಾ ಮನೋಭಾವನೆ ಅಡಕವಾಗಿರಬೇಕು ಎಂದು ಗ್ರಾ.ಪಂ ಅಧ್ಯಕ್ಷ ವೀರಣ್ಣ ಮರಡಿ ಹೇಳಿದರು.

ಅವರು ಶುಕ್ರವಾರ ಮಾರನಬಸರಿ ಗ್ರಾಮದ ಸಹಿಪ್ರಾ ಶಾಲೆಯಲ್ಲಿ ಜರುಗಿದ ಪಂಚಾಯತ ಮಟ್ಟದ ಕ್ರೀಡಾಕೂಟಗಳಿಗೆ ಚಾಲನೆ ನೀಡಿ ಮಾತನಾಡಿದರು.

ವಿದ್ಯಾರ್ಥಿಗಳು ಅಕ್ಷರ ಜ್ಞಾನಕ್ಕೆ ನೀಡಿದ ಮಹತ್ವವನ್ನು ಕ್ರೀಡೆಗಳಿಗೂ ನೀಡಬೇಕು. ಇದರಿಂದ ಆರೋಗ್ಯಯುತ ದೇಹದ ಜೊತೆಗೆ ಆರೋಗ್ಯಯುತ ಮನಸ್ಸು ಹೊಂದಲು ಸಾಧ್ಯ. ಅಲ್ಲದೆ ತಮ್ಮಲ್ಲಿ ಅಡಗಿರುವ ಸ್ಪರ್ಧಾಮನೋಭಾವನೆಯನ್ನು ಹೊರ ಚೆಲ್ಲುವ ಅವಕಾಶವನ್ನು ಕ್ರೀಡೆ ಒದಗಿಸಿಕೊಡುತ್ತದೆ ಎಂಬುದನ್ನು ವಿದ್ಯಾರ್ಥಿಗಳು ಅರಿಯಬೇಕು ಎಂದರು.




ಕ್ರೀಡೆಯು ಸಹೋದರತೆ ಮತ್ತು ಸೌಹಾರ್ಧತೆಯನ್ನು ಬೆಳೆಸುವಲ್ಲಿ ಅತ್ಯಂತ ಮುಖ್ಯ ಪಾತ್ರ ವಹಿಸುತ್ತದೆ. ಹೀಗಾಗಿ ವಿದ್ಯಾರ್ಥಿಗಳು ತಾವು ಇಷ್ಟಪಡುವ ಆಟಗಳಲ್ಲಿ ಭಾಗವಹಿಸಿ ಶಾಲೆ ಹಾಗೂ ಗ್ರಾಮದ ಕೀರ್ತಿಯನ್ನು ಹೆಚ್ಚಿಸಬೇಕು ಎಂದರು.

ಗ್ರಾ.ಪಂ ಸದಸ್ಯರಾದ ದಿಲ್‌ಶ್ಯಾದಬೇಗಂ ದೋಟಿಹಾಳ, ಹನಮವ್ವ ತಳವಾರ, ಬಸವರಾಜ ಮಾರನಬಸರಿ, ಬಸವರಾಜ ಕೊನಾಪೂರ, ಶರಣಪ್ಪ ತಳವಾರ, ಬಸವರಾಜ ದೇಸಾಯಿಪಟ್ಟಿ, ಬಾಬಾಜಾನ ಕಳಕಾಪೂರ ಸೇರಿದಂತೆ ಎಸ್‌ಡಿಎಂಸಿ ಪದಾಧಿಕಾರಿಗಳು, ಶಿಕ್ಷಕರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka